# ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್ ಅರ್ಜಿ

**ಇವರಿಗೆ :**

**ವ್ಯವಸ್ಥಾಪಕ ನಿರ್ದೇಶಕರು**
**ಶಿವಮೊಗ್ಗ ಹಾಲು ಒಕ್ಕೂಟ**
**ಮಾಚೇನಹಳ್ಳಿ ನಿದಿಗೆ ಅಂಚೆ**
**ಶಿವಮೊಗ್ಗ – 577 222.**

**ಇಂದ**
**ಹೆಸರು : ................................**
**ತಂದೆಯ ಹೆಸರು :....................**
**ವಿಳಾಸ..................................**
**...............................................**
**ಪಿನ್ ಕೋಡ್ :.......................**
**ಮೊಬೈಲ್ ನಂ :**
**ದೂರವಾಣಿ ಸಂ:**

ಸ್ವಾಮಿ,

**ವಿಷಯ :** ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ಒಂದು ವರ್ಷದ ಅವಧಿಗೆ ದರ ಗುತ್ತಿಗೆ ಪಡೆಯುವ ಸಲುವಾಗಿ.

ಮದರ್ ಡೇರಿ, ಬೆಂಗಳೂರು ಹಾಗೂ ಧಾರವಾಡ ಪ್ಯಾಕಿಂಗ್ ಕೇಂದ್ರಗಳಿಂದ ಕ್ಷೀರಭಾಗ್ಯ ಯೋಜನೆಯಡಿ ಹಾಲಿನ ಪುಡಿಯ ಸಾಗಾಣಿಕೆ ಮತ್ತು ವಿತರಣೆಯ ಬಗ್ಗೆ ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ವಾರ್ಷಿಕ ಗುತ್ತಿಗೆ ಅರ್ಹತೆ ಪಡೆಯುವ ಸಲುವಾಗಿ ಅರ್ಜಿ ಸಲ್ಲಿಸುತ್ತಿರುವ ಬಗ್ಗೆ ನನ್ನ ದರ ನಮೂದಿಸಿ ಅಗತ್ಯವಿರುವ ಎಲ್ಲಾ ಮಾಹಿತಿ ಮತ್ತು ದಾಖಲೆಗಳನ್ನು ಈ ಕೆಳಕಂಡಂತೆ ಸಲ್ಲಿಸುತ್ತಿದ್ದೇನೆ.

ಶ್ರೀ/ಶ್ರೀಮತಿ.................................................. ಆದ ನಾನು / ನನ್ನ ಪರವಾಗಿ ಮಾರ್ಗ ಸಂಖ್ಯೆ ......................ರ ತಕ್ಕ ಸಾಮರ್ಥ್ಯದ ವಾಹನವನ್ನು ಹೊಂದಿದ್ದು, ದೃಢೀಕೃತ ದಾಖಲೆಗಳೊಂದಿಗೆ ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್‌ನ ಕಾನೂನಿಗೆ ಒಳಪಟ್ಟು, ಟೆಂಡರ್‌ನಲ್ಲಿ ಭಾಗವಹಿಸಲು ದಾಖಲೆಗಳನ್ನು ಲಗತ್ತಿಸಿರುತ್ತೇನೆ.

ನಾನು ಟೆಂಡರ್ ಪ್ರಕಟಣೆಯಲ್ಲಿ ತಿಳಿಸಿರುವ ಸೂಚನೆಗಳು ನಿಯಮ ಮತ್ತು ನಿಬಂಧನೆಗೊಳಪಟ್ಟು ತಾಂತ್ರಿಕ ಮತ್ತು ವಾಣಿಜ್ಯ ಟೆಂಡರ್ ಗುತ್ತಿಗೆಯಲ್ಲಿ ಭಾಗವಹಿಸುತ್ತಿದ್ದೇನೆ. ನನಗೆ ಟೆಂಡರ್ ಒಪ್ಪಿಗೆಯಾದಲ್ಲಿ ಟೆಂಡರ್ ಪ್ರಕಟಣೆಯಲ್ಲಿ ಪ್ರಕಟಿಸಿರುವ ಸಾಮರ್ಥ್ಯದ ಮತ್ತು ಮಾದರಿಯ ವಾಹನ ಒದಗಿಸಲು ಬದ್ಧನಾಗಿರುತ್ತೇನೆ.

ನನಗೆ ತಿಳಿದ ಮಟ್ಟಿಗೆ ಟೆಂಡರ್ ಸಮಿತಿಯು ಅರ್ಜಿಯನ್ನು ಯಾವುದೇ ಸೂಚನೆ ನೀಡದೆ ಅಂಗೀಕರಿಸುವ ಮತ್ತು ತಿರಸ್ಕರಿಸುವ ಸಂಪೂರ್ಣ ಅಧಿಕಾರವನ್ನು ಹೊಂದಿರುತ್ತದೆ.

ವಾಣಿಜ್ಯ ಟೆಂಡರ್ ತೆರೆದ ದಿನದಿಂದ 60 ದಿನಗಳ ಕಾಲ ನನ್ನ ಟೆಂಡರ್ / ದರ ನೀಡಿಕೆ ಊರ್ಜಿತಾವಸ್ತೆಯಲ್ಲಿಡಲು ಒಪ್ಪಿರುತ್ತೇನೆ.

**ಮಾರ್ಗದ ಹೆಸರು :**

**ಟೆಂಡರ್‌ದಾರರ ಸಹಿ ಮತ್ತು ಹೆಸರು**
(ದಪ್ಪ ಅಕ್ಷರಗಳಲ್ಲಿ)

**ಅಡಕಗಳು :**

1. ನನ್ನ ಪರವಾಗಿ ಸಹಿ ಮಾಡುವ ಅಧಿಕಾರ ಪತ್ರ (ಅವಶ್ಯಕತೆ ಇದ್ದಲ್ಲಿ)
2. ತಾಂತ್ರಿಕ ಟೆಂಡರ್ ಅರ್ಜಿಯನ್ನು ಮೊಹರು ಮಾಡಿ ಪ್ರತ್ಯೇಕವಾಗಿ ಸಲ್ಲಿಸಿದೆ.
3. ವಾಣಿಜ್ಯ ಟೆಂಡರ್ ಅರ್ಜಿಯನ್ನು ಮೊಹರು ಮಾಡಿದ ದರ ಪಟ್ಟಿಯೊಂದಿಗೆ ಪ್ರತ್ಯೇಕವಾಗಿ ಸಲ್ಲಿಸಿದೆ.

# ದರಪಟ್ಟಿ ಸಲ್ಲಿಸಲು ನಿಯಮ ನಿಬಂಧನೆಗಳು

## ಎ) ಕ್ಷೀರ ಭಾಗ್ಯ ಯೋಜನೆಯಡಿ ಮದರ್ ಡೇರಿ, ಬೆಂಗಳೂರು ಹಾಗೂ ಧಾರವಾಡ ಪ್ಯಾಕಿಂಗ್ ಕೇಂದ್ರಗಳಿಂದ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸರಬರಾಜು ಮಾಡಲು ಸಾರಿಗೆ ವಾಹನ ಒದಗಿಸಲು ಷರತ್ತು ಮತ್ತು ನಿಬಂಧನೆಗಳು :–

1. ಯಶಸ್ವಿ ಟೆಂಡರ್‌ದಾರರು ಬೆಂಗಳೂರು, ಧಾರಾವಾಡದ ಕಹಾಮ ನಿಗದಿಪಡಿಸಿದ ಪ್ಯಾಕಿಂಗ್ ಕೇಂದ್ರಗಳಿಂದ ಕೆನೆಭರಿತ ಹಾಲಿನ ಪುಡಿಯನ್ನು ಎತ್ತುವಳಿ ಮಾಡಿ ಆಯ್ಕೆಯಾದ ವಿಭಾಗಗಳ ತಾಲ್ಲೂಕುಗಳಲ್ಲಿನ ಸರ್ಕಾರಿ ಗೋದಾಮುಗಳಿಗೆ / ಖಾಸಗಿ ಗುತ್ತಿಗೆ ಗೋದಾಮುಗಳಿಗೆ / ಎಲ್ಲಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಗೋದಾಮುಗಳಿಗೆ ಸಾಗಾಣಿಕೆ ಮಾಡುವುದು.
2. ಹಾಲಿನ ಪುಡಿ ಪ್ರಮಾಣದಲ್ಲಿ ಸಿ.ಡಿ.ಪಿ.ಓ ಕಚೇರಿ / ಶಾಲೆಗಳ ಬೇಡಿಕೆಗಳಿಗನುಸಾರ ಕಾಲ ಕಾಲಕ್ಕೆ ಬದಲಾವಣೆಗೆ ಒಳಪಟ್ಟಿರುತ್ತದೆ.
3. ಟೆಂಡರ್‌ದಾರರು ಮದರ್‌ಡೈರಿ ಬೆಂಗಳೂರು ಪ್ಯಾಕಿಂಗ್ ಕೇಂದ್ರಗಳಿಂದ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸರಬರಾಜು ಮಾಡಲು ಕನಿಷ್ಠ 6 ಟನ್ ಸಾಮರ್ಥ್ಯದ 1 ವಾಹನ ಹೊಂದಿರಬೇಕು ಹಾಗೂ ಧಾರವಾಡ ಪ್ಯಾಕಿಂಗ್ ಕೇಂದ್ರಗಳಿಂದ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸರಬರಾಜು ಮಾಡಲು ಕನಿಷ್ಠ 6 ಟನ್ ಸಾಮರ್ಥ್ಯದ 2 ವಾಹನ ಹೊಂದಿರಬೇಕು. ಸದರಿ ವಾಹನಗಳ ದಾಖಲಾತಿಯನ್ನು ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡತಕ್ಕದ್ದು.
4. ಅರ್ಜಿದಾರರು ಪ್ಯಾಕಿಂಗ್ ಕೇಂದ್ರಗಳಿಂದ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸರಬರಾಜು ಮಾಡಲು 3 ಟನ್‌ವರೆಗೆ, 3 ರಿಂದ 6 ಟನ್‌ವರೆಗೆ, 6 ರಿಂದ 10 ಟನ್‌ವರೆಗೆ ಹಾಗೂ 10 ಟನ್ ಮೇಲ್ಪಟ್ಟು ಪ್ರತಿ ಟನ್‌ಗೆ ಸಾಗಾಣಿಕೆ ದರವನ್ನು ನಮೂದಿಸತಕ್ಕದ್ದು.
5. ನಿಗದಿತ ಟ್ರಿಪ್‌ನಲ್ಲಿ 2 ಅಥವಾ ಅದಕ್ಕಿಂತ ಹೆಚ್ಚಿನ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ಮಾಡಬೇಕಾದಲ್ಲಿ ಹೆಚ್ಚಿನ ಅಂತರವಿರುವ ಕೇಂದ್ರದ ಬಾಡಿಗೆಯನ್ನು ನೀಡಲಾಗುವುದು ಹಾಗೂ ಅಂತಹ ಸಂದರ್ಭದಲ್ಲಿ ಹೆಚ್ಚುವರಿಯಾಗಿ ನೀಡಬಹುದಾದ ದರವನ್ನು ಪಾವತಿಸಲು ಕಮರ್ಷಿಯಲ್ ಟೆಂಡರ್ ದರ ಪಟ್ಟಿಯಲ್ಲಿ ದರವನ್ನು ನಮೂದಿಸತಕ್ಕದ್ದು.
6. ಕೆನೆಭರಿತ ಹಾಲಿನ ಪುಡಿಯನ್ನು 500 ಗ್ರಾಂ ಪ್ಯಾಕ್ ಹಾಗೂ 1 ಕೆ.ಜಿ ಪ್ಯಾಕ್‌ನ 25/20 ಕೆ.ಜಿ ಚೀಲಗಳಲ್ಲಿ ಎತ್ತುವಳಿ ಮಾಡಬೇಕಾಗಿರುತ್ತದೆ.
7. ಕೆಲವೊಮ್ಮೆ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳವರ ಕಚೇರಿಯಿಂದ / ಜಿಲ್ಲಾ ಪಂಚಾಯತ್ ಅಕ್ಷರ ದಾಸೋಹ ಇಲಾಖೆಯವರಿಂದ ಬರುವ ಬೇಡಿಕೆ ಪ್ರಕಾರ 2 ತಿಂಗಳ ಬೇಡಿಕೆ ಕೆನೆಭರಿತ ಹಾಲಿನ ಪುಡಿಯನ್ನು ಒಂದೇ ತಿಂಗಳಲ್ಲಿ ಸಂಬಂಧಪಟ್ಟ ತಾಲ್ಲೂಕು ಕೇಂದ್ರಗಳಿಗೆ ಸಾಗಾಣಿಕೆ ಮಾಡಬೇಕಾಗಿರುವುದರಿಂದ ಎತ್ತುವಳಿ ಪ್ರಮಾಣದಲ್ಲಿ ವ್ಯತ್ಯಾಸವಾಗುವ ಸಾಧ್ಯತೆ ಇರುತ್ತದೆ.
8. ಹಾಲಿನ ಪುಡಿ ಪ್ಯಾಕಿಂಗ್ ಕೇಂದ್ರಗಳಿಂದ ನಿಗದಿತ ದಿನಾಂಕದಂದು ಹಾಲಿನ ಪುಡಿ ಲೋಡ್ ಸಿಗದೇ ಇರುವ ಸಂದರ್ಭಗಳಲ್ಲಿ ಖಾಲಿ ವಾಹನ ಲೋಡಿಂಗ್ ಆಗಬೇಕಾಗಿರುವ ಸ್ಥಳದಲ್ಲೇ ಕಾಯಬೇಕಾಗಿದ್ದು, ಇದಕ್ಕೆ ಹೆಚ್ಚುವರಿ ಮೊತ್ತ ಪಾವತಿಸಲು ಅವಕಾಶವಿರುವುದಿಲ್ಲ.
9. ಒಕ್ಕೂಟದ ಆಯಾ ಜಿಲ್ಲಾ ಹಾಗೂ ತಾಲ್ಲೂಕು ನೋಡಲ್ ಅಧಿಕಾರಿಗಳು ಕಾಲಕಾಲಕ್ಕೆ ಸೂಚಿಸುವ ಸಮಯಕ್ಕೆ ವಾಹನವನ್ನು ಒದಗಿಸುವುದು ಹಾಗೂ ಸೂಚಿಸುವ ಸ್ಥಳಕ್ಕೆ / ತಾಲ್ಲೂಕುಗಳಿಗೆ ಸಕಾಲಕ್ಕೆ ಹಾಲಿನ ಪುಡಿಯನ್ನು ಸಾಗಾಣಿಕೆ ಮಾಡುವುದು ವಾಹನ ಗುತ್ತಿಗೆದಾರರ ಜವಾಬ್ದಾರಿಯಾಗಿರುತ್ತದೆ.
10. ಹಾಲಿನ ಪುಡಿಯನ್ನು ಪ್ಯಾಕಿಂಗ್ ಕೇಂದ್ರಗಳಿಂದ ಪಡೆದು ಸುರಕ್ಷಿತವಾಗಿ ಒಕ್ಕೂಟದಿಂದ ಸೂಚಿಸುವ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಿಗೆ ಸರಬರಾಜು ಮಾಡುವುದು. ಈ ಸಂಬಂಧ ಡ್ಯಾಮೇಜ್ ಅಥವಾ ಇನ್ನಾವುದೇ ದೂರುಗಳು ಬಂದಲ್ಲಿ ಅದಕ್ಕೆ ಸಾಗಾಣಿಕೆ ಗುತ್ತಿಗೆದಾರರೇ ಜವಾಬ್ದಾರರಾಗಿರುತ್ತಾರೆ ಹಾಗೂ ಸದರಿ ನಷ್ಟದ ಮೊತ್ತವನ್ನು ಗುತ್ತಿಗೆದಾರರ ಸಾಗಾಣಿಕೆ ಬಿಲ್ಲಿನಲ್ಲಿ ಕಟಾಯಿಸಲಾಗುವುದು.
11. ಕೆನೆಭರಿತ ಹಾಲಿನ ಪುಡಿಯನ್ನು ಪ್ಯಾಕಿಂಗ್ ಕೇಂದ್ರಗಳಿಂದ ಸೂಚಿಸುವ ಜಿಲ್ಲಾ/ತಾಲ್ಲೂಕು ಗೋದಾಮುಗಳಿಗೆ / ಸಿ.ಡಿ.ಪಿ.ಓ ಕಚೇರಿ ಗೋದಾಮುಗಳಿಗೆ / ಖಾಸಗಿ ಗುತ್ತಿಗೆದಾರರ ಗೋದಾಮುಗಳಿಗೆ ತಲುಪಿಸಿ ಇಲಾಖೆಯ ಡೆಸಿಗ್ನೇಟೆಡ್ ಅಧಿಕಾರಿಗಳಿಂದ / ಗುತ್ತಿಗೆದಾರರಿಂದ ತಪ್ಪದೆ ಸಹಿ ಹಾಗೂ ಮೊಹರು ಹೊಂದಿರುವ ಸ್ವೀಕೃತಿಯನ್ನು ಪಡೆದು ಅದನ್ನು ಒಕ್ಕೂಟಕ್ಕೆ ಸಲ್ಲಿಸಬೇಕಾಗಿರುತ್ತದೆ.
12. ಲೋಡ್‌ನಲ್ಲಿ 2 ಅಥವಾ ಅದಕ್ಕಿಂತ ಹೆಚ್ಚಿನ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ಮಾಡಬೇಕಾದಲ್ಲಿ ಹೆಚ್ಚಿನ ಅಂತರವಿರುವ ಕೇಂದ್ರದ ಬಾಡಿಗೆಯನ್ನು ಮಾತ್ರ ಸಾಗಾಣಿಕೆ ಬಿಲ್ ಪಾವತಿಗೆ ಪರಿಗಣಿಸಲಾಗುವುದು.

13. ಹಾಲಿನ ಪುಡಿ ಸಾಗಾಣಿಕೆ ಮಾಡುವ ಸಮಯದಲ್ಲಿ ವಾಹನದ ಜೊತೆಗೆ ಅಗತ್ಯ ದಾಖಲೆ / ಮಾಹಿತಿಯನ್ನು ಕಳುಹಿಸುವಂತೆ ಕ್ರಮವಿಡುವುದು ತಪ್ಪಿದಲ್ಲಿ ಇದರಿಂದಾಗುವ ತೊಂದರೆಗಳಿಗೆ ಸಾಗಾಣಿಕೆ ಗುತ್ತಿಗೆದಾರರೆ ಜವಾಬ್ದಾರರಾಗಿರುತ್ತಾರೆ.
14. ಡೀಸೆಲ್ ದರವು ಹೆಚ್ಚು ಅಥವಾ ಕಡಿಮೆಯಾದಲ್ಲಿ ಸಾಗಾಣಿಕೆ ದರ ಪರಿಷ್ಕರಿಸಲಾಗುವುದಿಲ್ಲ.
15. ನಿಗದಿತ ಅವಧಿಯಲ್ಲಿ ಜಿಲ್ಲಾ/ತಾಲ್ಲೂಕು ಗೋದಾಮುಗಳಿಗೆ/ಅಂಗನವಾಡಿ/ಖಾಸಗಿ ಗುತ್ತಿಗೆದಾರರ ಗೋದಾಮುಗಳಿಗೆ ಹಾಲಿನ ಪುಡಿ ಸರಬರಾಜು ಆಗದೆ ವಾಹನ ಗುತ್ತಿಗೆದಾರರಿಂದ / ವಾಹನಗಳ ತೊಂದರೆಯಿಂದ ವಿಳಂಬವಾದಲ್ಲಿ ಒಕ್ಕೂಟದ ವತಿಯಿಂದ ಸೂಕ್ತ ದಂಡ ವಿಧಿಸಲಾಗುವುದು ಹಾಗೂ ದಂಡದ ಮೊತ್ತವನ್ನು ಗುತ್ತಿಗೆದಾರರ ಸಾಗಾಣಿಕೆ ಬಿಲ್ಲಿನಲ್ಲಿ ಕಟಾಯಿಸಿಕೊಳ್ಳಲಾಗುವುದು.
16. ಪ್ರತಿ ತಿಂಗಳು 3ನೇ ತಾರೀಖಿನೊಳಗೆ ಗುತ್ತಿಗೆದಾರರು ಸಾಗಾಣಿಕೆ ವೆಚ್ಚದ ಬಿಲ್ಲನ್ನು ಒಕ್ಕೂಟಕ್ಕೆ ಸಲ್ಲಿಸುವುದು ಹಾಗೂ ಸಾಗಾಣಿಕೆ ಬಿಲ್ಲಿನಲ್ಲಿ ಪಾನ್ ಸಂಖ್ಯೆ ಮತ್ತು ಬ್ಯಾಂಕ್ ಖಾತೆ ಸಂಖ್ಯೆ ನಮೂದಿಸತಕ್ಕದ್ದು.
17. ಹಾಲಿನ ಪುಡಿ ಸಾಗಾಣಿಕೆ ಗುತ್ತಿಗೆಗೆ ಸಂಬಂಧಿಸಿದಂತೆ ಯಾವುದೇ ದಂಡ/ಕಟಾವಣೆಗಳನ್ನು ಗುತ್ತಿಗೆದಾರರ ಸಾಗಾಣಿಕೆ ಬಿಲ್ ಅಥವಾ ಸದರಿಯವರು ಒಕ್ಕೂಟದಲ್ಲಿ ತೊಡಗಿಸಿರುವ ಭದ್ರತಾ ಠೇವಣಿಯಿಂದ ಕಟಾಯಿಸಿಕೊಳ್ಳಲಾಗುವುದು.
18. ಹಾಲಿನ ಪುಡಿ ಸರಬರಾಜು ವೇಳೆಯಲ್ಲಿ ಹಾಲಿನ ಪುಡಿ ಪ್ಯಾಕೇಟ್ / ಚೀಲಗಳಲ್ಲಿ ಯಾವುದೇ ಷಾರ್ಟೇಜ್ / ಡ್ಯಾಮೇಜು ಆದಲ್ಲಿ ಅದಕ್ಕೆ ಸಾಗಾಣಿಕೆ ಗುತ್ತಿಗೆದಾರರು ಜವಾಬ್ದಾರರಾಗಿರುತ್ತಾರೆ ಹಾಗೂ ಅದರ ಮೊತ್ತವನ್ನು ಗುತ್ತಿಗೆದಾರರ ಬಿಲ್ಲಿನಲ್ಲಿ ಕಟಾಯಿಸಿಕೊಳ್ಳಲಾಗುವುದು.
19. ಟೆಂಡರ್‌ನಲ್ಲಿ ನಿಗದಿಯಾಗುವ ಸಾಗಾಣಿಕೆ ದರವು ಲೋಡಿಂಗ್ ಮತ್ತು ಅನ್ ಲೋಡಿಂಗ್ ವೆಚ್ಚ ಹಾಗೂ ಅನ್ವಯಿಸುವ ಎಲ್ಲಾ ತೆರಿಗೆಗಳು ಸೇರುತ್ತವೆ.

**ಟೆಂಡರ್‌ದಾರರ ಸಹಿ**

***1.0 ಅರ್ಹತೆಗಳು:***

1.1 ಎಲ್ಲಾ ಅರ್ಜಿ ಮೂಲಗಳವರಿಗೂ ದರಪಟ್ಟಿ ದಸ್ತಾವೇಜು ಸಲ್ಲಿಸಲು ಮುಕ್ತ ಅವಕಾಶ ಕಲ್ಪಿಸಲಾಗಿದೆ.

1.2 ಗುತ್ತಿಗೆ ಪಡೆದುಕೊಳ್ಳಲು ಅರ್ಹರಾಗಬೇಕಾದರೆ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲು ಬೇಕಾದ ಸಾಮರ್ಥ್ಯ ಅಗತ್ಯ ಸಂಪನ್ಮೂಲಗಳಿರುವುದರ ಬಗ್ಗೆ ದಾಖಲೆ, ಪುರಾವೆಗಳನ್ನು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಒದಗಿಸತಕ್ಕದ್ದು. ಈ ಕಾರಣದಿಂದಾಗಿ ದರಪಟ್ಟಿ, ದಸ್ತಾವೇಜು ಸಲ್ಲಿಸುವುದರ ಪ್ರಸ್ತಾವನೆಗಳಲ್ಲಿ ಕೆಳಗೆ ನಮೂದಿಸಿರುವ ಮಾಹಿತಿಗಳನ್ನು ಪೂರೈಕೆ ಮಾಡತಕ್ಕದ್ದು.

ಅ) ದರಪಟ್ಟಿ : ದಸ್ತಾವೇಜು ಸಲ್ಲಿಸುವವರು ಹಾಲಿ ವಾಹನ ಹೊಂದಿದ್ದಲ್ಲಿ, ಸಾಗಾಣಿಕೆಗೆ ಬಳಸುವ ವಾಹನದ ಆರ್.ಸಿ. ಪುಸ್ತಕದ ನಕಲು ಪ್ರತಿ, ವಾಹನದ ವಿಮೆ ಪ್ರತಿ ಹಾಗೂ ಸಂಬಂಧಪಟ್ಟ ಅಗತ್ಯ ದಾಖಲೆಗಳನ್ನು ದರಪಟ್ಟಿ – ದಸ್ತಾವೇಜಿನೊಂದಿಗೆ ಲಗತ್ತಿಸತಕ್ಕದ್ದು.

**2.0 ದರಪಟ್ಟಿ – ದಸ್ತಾವೇಜು ಸಲ್ಲಿಕೆ ವೆಚ್ಚ :**

2.1 ದರಪಟ್ಟಿ – ದಸ್ತಾವೇಜು ಸಲ್ಲಿಕೆಗೆ ಸಂಬಂಧಿಸಿದಂತೆ ಪೂರ್ವಭಾವಿ ಸಿದ್ಧತೆ, ಪ್ರಸ್ತಾವನೆ ಸಿದ್ಧಪಡಿಸುವುದು ಇವೇ ಮುಂತಾದುವಕ್ಕೆ ತಗಲುಬಹುದಾದ ಎಲ್ಲಾ ವೆಚ್ಚವನ್ನು ದರಪಟ್ಟಿ – ದಸ್ತಾವೇಜು ಸಲ್ಲಿಕೆದಾರರೇ ಭರಿಸತಕ್ಕದ್ದು ದರಪಟ್ಟಿ – ದಸ್ತಾವೇಜು ಸಲ್ಲಿಕೆ ಪ್ರಕ್ರಿಯೆ, ನಿರ್ವಹಣೆ ಹಾಗೂ ಫಲಿತಾಂಶದ ಪರಿಣಾಮಕ್ಕೆ ಸಂಬಂಧಿಸಿದಂತೆ, ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟವು ಯಾವುದೇ ಕಾರಣಕ್ಕೂ ಜವಾಬ್ದಾರರಲ್ಲ.

**3.0 ದರಪಟ್ಟಿ – ದಸ್ತಾವೇಜು ನಿರ್ದೇಶನಗಳು :**

3.1 ದರಪಟ್ಟಿ – ದಸ್ತಾವೇಜುದಾರರು ತಾವು ಸಲ್ಲಿಸಬೇಕಾಗಿರುವ ದರಪಟ್ಟಿ – ದಸ್ತಾವೇಜು ಕುರಿತಂತೆ ನಿರ್ದೇಶಿಸಲಾಗಿರುವ ಎಲ್ಲಾ ನಿಯಮ ನಿಬಂಧನೆಗಳನ್ನು ಎಚ್ಚರಿಕೆಯಿಂದ ಪರೀಕ್ಷಿಸತಕ್ಕದ್ದು, ದರಪಟ್ಟಿ – ದಸ್ತಾವೇಜು ಸಲ್ಲಿಸಲು ಅಗತ್ಯವಾದ ಎಲ್ಲಾ ಅಧಿಕೃತ ಮಾಹಿತಿಗಳು, ದಾಖಲೆಗಳು ದರಪಟ್ಟಿ – ದಸ್ತಾವೇಜಿನೊಂದಿಗೆ ಲಗತ್ತಿಸತಕ್ಕದ್ದು ಹಾಗಲ್ಲದೆ ಪೂರ್ಣ ಮಾಹಿತಿ ನೀಡುವಲ್ಲಿ ವಿಫಲವಾದರೆ ದರಪಟ್ಟಿ – ದಸ್ತಾವೇಜನ್ನು ತಿರಸ್ಕರಿಸಲಾಗುತ್ತದೆ.

**4.0 ದರಪಟ್ಟಿ – ದಸ್ತಾವೇಜು ಸಲ್ಲಿಕೆ ಬೆಲೆ :**

4.1 ದರಪಟ್ಟಿ ಆಹ್ವಾನಿಸಿದ ಸಂದರ್ಭದಲ್ಲಿ ನಿಖರವಾಗಿ ಸೂಚಿಸಲಾಗಿರುವ ನಿಯಮ ನಿಬಂಧನೆಯಂತೆ ದರಪಟ್ಟಿ – ದಸ್ತಾವೇಜಿನ ಗುತ್ತಿಗೆಯ ಪೂರ್ಣ ಅವಧಿಗೆ ಎಂದಿರುವುದನ್ನು ದರಪಟ್ಟಿ – ದಸ್ತಾವೇಜುದಾರರು ಸ್ಪಷ್ಟ ಮಾತಿನಿಂದ ದರಪಟ್ಟಿ – ದಸ್ತಾವೇಜಿನಲ್ಲಿ ಖಚಿತವಾಗಿ ದಾಖಲಿಸತಕ್ಕದ್ದು, ಹಾಗಲ್ಲದೆ ಬೇರೆ ರೀತಿ ಇರತಕ್ಕದ್ದಲ್ಲ.

**5.0 ನಿಗದಿತ ದರ :**

5.1 ದಾಖಲೆಗೊಂಡ ದರ : ದರಪಟ್ಟಿ – ದಸ್ತಾವೇಜುದಾರನೊಂದಿಗೆ ಸಂಧಾನಗೊಂಡ ನಿಗದಿತ ದರ, ಗುತ್ತಿಗೆಯ ಪೂರ್ಣ ಅವಧಿಯಲ್ಲಿ ಜಾರಿಯಲ್ಲಿರತಕ್ಕದ್ದು, ಯಾವುದೇ ಕಾರಣಕ್ಕಾಗಿ ಯಾವುದೇ ಬಾಬ್ತಿನಲ್ಲಿ ಹೆಚ್ಚಳ ಆಗುವುದಕ್ಕೆ ಅವಕಾಶ ಇರುವುದಿಲ್ಲ ಹಾಗೂ ಅಂತಹ ವ್ಯತ್ಯಯವನ್ನು ಪರಿಗಣಸದೆ ಜೊತೆಗೆ ತಿರಸ್ಕರಿಸಲಾಗುವುದು. ಕೆಲವು ವಿಶೇಷ ಸಂದರ್ಭಗಳಲ್ಲಿ ನಿಗದಿತ ದರವನ್ನು ಪರಿಷ್ಕರಿಸಲು ಗುತ್ತಿಗೆದಾರರು ಮನವಿ ನೀಡಿದಲ್ಲಿ ಸದರಿ ಮನವಿಯನ್ನು ಸಂದರ್ಭಕ್ಕನುಗುಣವಾಗಿ ಪರಿಗಣಿಸಬಹುದಾಗಿದೆ. ಆದರೆ ಈ ವಿಷಯದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರ ತೀರ್ಮಾನವೇ ಅಂತಿಮವಾಗಿರುತ್ತದೆ.

5.2 ಗುತ್ತಿಗೆದಾರರು ನಮೂದಿಸುವ ದರವು ಎಲ್ಲಾ ತೆರಿಗೆಗಳನ್ನು ರಾಜ್ಯ/ಕೇಂದ್ರ ಸರ್ಕಾರದ ಟೋಲ್ ಫೀ (ರಾಜ್ಯ/ರಾಷ್ಟ್ರೀಯ ಹೆದ್ದಾರಿ ಶುಲ್ಕ), ಸೇವಾ ತೆರಿಗೆ, ವೃತ್ತಿ ತೆರಿಗೆ, ವ್ಯಾಟ್ ಮುಂತಾದವುಗಳನ್ನು ಒಳಗೊಂಡಿರಬೇಕು.

**6.0 ದರಪಟ್ಟಿ – ದಸ್ತಾವೇಜಿನ ಸಿಂಧುತ್ವ :**

6.1 ದರಪಟ್ಟಿ – ದಸ್ತಾವೇಜಿನ ಸಲ್ಲಿಕೆ, ಅಂಗೀಕಾರಗೊಂಡಿರುವ ರೀತ್ಯಾ ದರಪಟ್ಟಿ ತೆರೆಯುವ ಪ್ರಕ್ರಿಯೆಯ ದಿನಾಂಕದಿಂದ 60 ದಿನಗಳು ಮಾತ್ರ ಅದರ ಸಿಂಧುತ್ವ ಊರ್ಜಿತವಾಗಿರುತ್ತದೆ.

6.2 ಕೆಲವಾರು ಅನಿವಾರ್ಯ ಪರಿಸ್ಥಿತಿಯಲ್ಲಿ ಮಾತ್ರ ದರಪಟ್ಟಿ – ದಸ್ತಾವೇಜಿನ ಸಿಂಧುತ್ವ ಅವಧಿ ಮುಕ್ತಾಯಗೊಳ್ಳುವ ಮುನ್ನ ಶಿವಮೊಗ್ಗ ಹಾಲು ಒಕ್ಕೂಟವು ದರ ಪಟ್ಟಿದಾರರನ್ನು ನಿಗದಿತ ಸಿಂಧುತ್ವ ಅವಧಿಯನ್ನು ವಿಸ್ತರಿಸಬಹುದಾಗಿದೆ. ವಿಸ್ತರಣೆ ಕೋರಿಕೆಯನ್ನು ಬರವಣಿಗೆಯಲ್ಲಿ, ದೂರವಾಣಿ ಸಂಪರ್ಕದ ಮೂಲಕ ಮಾಡಬಹುದಾಗಿದೆ. ಆದರೆ ದರಪಟ್ಟಿ – ದಸ್ತಾವೇಜು ಸಲ್ಲಿಕೆ ಸಂದರ್ಭದಲ್ಲಿ ಒದಗಿಸಲಾಗಿದ್ದ ಆಧಾರ ನೀಡಿಕೆಯನ್ನು (ಭದ್ರತಾ ಠೇವಣಿಯನ್ನು) ಅದಕ್ಕನುಗುಣವಾಗಿ ವಿಸ್ತರಿಸಲು ಗುತ್ತಿಗೆದಾರರಿಗೆ ತಿಳಿಸಬಹುದಾಗಿರುತ್ತದೆ.

**7.0 ದರಪಟ್ಟಿ – ದಸ್ತಾವೇಜು ಸಲ್ಲಿಕೆಗೆ ಆಧಾರ ನೀಡಿಕೆ :**

7.1 ದರಪಟ್ಟಿದಾರ ದರಪಟ್ಟಿ – ದಸ್ತಾವೇಜು ಸಲ್ಲಿಕೆ ನಿಯಮದಡಿ ಸಾಗಾಣಿಕೆ ಕಾಮಗಾರಿಗೆ ಅವುಗಳ ಮುಂದೆ ಸೂಚಿಸಿರುವಂತೆ ಇ–ಪ್ರೋಕ್ಯೂರ್‌ಮೆಂಟ್ ನಿಯಮವಳಿಯಂತೆ ಆಧಾರ ನೀಡಿಕೆ (ಇ.ಎಂ.ಡಿ.) ಒದಗಿಸತಕ್ಕದ್ದು. ಕಡಿಮೆ ಇ.ಎಂ.ಡಿ ಸಲ್ಲಿಸಿದ ಟೆಂಡರ್‌ಗಳನ್ನು ತಿರಸ್ಕರಿಸುವುದು.

7.2 ಆಧಾರ ನೀಡಿಕೆ ಮೊತ್ತವನ್ನು (ಇ.ಎಂ.ಡಿ.ಮೊತ್ತವನ್ನು) ಟೆಂಡರ್ ಪ್ರಕಟಣೆಯಲ್ಲಿ ಪ್ರಕಟಿಸಿದಂತೆ ಇ–ಪ್ರೋಕ್ಯೂರ್‌ಮೆಂಟ್ ನಿಯಾಮವಳಿಯಂತೆ ಸಲ್ಲಿಸುವುದು.

7.3 ದರಪಟ್ಟಿ – ದಸ್ತಾವೇಜುದಾರ ಪ್ರತಿ ಮಾರ್ಗದ ಸಾಗಾಣಿಕೆ ಕಾಮಗಾರಿಗೂ ಪ್ರತ್ಯೇಕ ದರಪಟ್ಟಿ – ದಸ್ತಾವೇಜು ಸಲ್ಲಿಸತಕ್ಕದ್ದು.

7.4 ಯಾವುದೇ ದರಪಟ್ಟಿ ಸಲ್ಲಿಕೆಯ ಜೊತೆ ನಿಗಧಿತ ಆಧಾರ (ಇ.ಎಂ.ಡಿ.) ನೀಡಿಕೆ ಇರದಿದ್ದರೆ ಅಥವಾ ನಿಗದಿತ ಮೊತ್ತಕ್ಕಿಂತ ಕಡಿಮೆ ಇದ್ದರೆ ಅಂತಹ ದರಪಟ್ಟಿ – ದಸ್ತಾವೇಜನ್ನು ಶಿವಮೊಗ್ಗ ಹಾಲು ಒಕ್ಕೂಟವು ತಿರಸ್ಕರಿಸುತ್ತದೆ.

7.5 ಅಂಗೀಕಾರ ಆಗದ ದರಪಟ್ಟಿದಾರರಿಗೆ ಅವರು ಸಲ್ಲಿಸಿರುವ ಆಧಾರ (ಇ.ಎಂ.ಡಿ.) ಮೊತ್ತವನ್ನು ಆದಷ್ಟು ಶೀಘ್ರವಾಗಿ ಪ್ರಾಮಾಣಿಕವಾಗಿ ಹಿಂತಿರುಗಿಸಲಾಗುವುದು. ಅಂದರೆ ಅದು ನಮ್ಮ ದಸ್ತಾವೇಜಿನಲ್ಲಿ ಪ್ರಕಟಿಸಿರುವಂತೆ ದರಪಟ್ಟಿಯ ಸಿಂಧುತ್ವದ ನಿಗದಿತ ಅವಧಿಯ ನಂತರದ 30 ದಿನಗಳೊಳಗಾಗಿ

7.6 ಅಂಗೀಕಾರ ಆಗುವ ದರಪಟ್ಟಿದಾರರಿಗೆ, ಅವರು ಸಲ್ಲಿಸಿರುವ ಆಧಾರ ಮೊತ್ತವನ್ನು ಒಪ್ಪಂದಕ್ಕೆ ಸಹಿ ಹಾಕಿದಾಗ ಹಾಗೂ ಅಗತ್ಯವಾದ ಕಾರ್ಯ ನಿರ್ವಹಣಾ ಪ್ರಮಾಣ ಪತ್ರವನ್ನು ಒದಗಿಸಿದಾಗ ಹಿಂತಿರುಗಿಸಲಾಗುವುದು.

7.7 ದರಪಟ್ಟಿದಾರ ಸಲ್ಲಿಸಿರುವ ಇ.ಎಂ.ಡಿ./ಆಧಾರ ಮೊತ್ತಕ್ಕೆ ಬಡ್ಡಿಯನ್ನು ಶಿವಮೊಗ್ಗ ಹಾಲು ಒಕ್ಕೂಟ ಪಾವತಿಸುವುದಿಲ್ಲ.

**8.0 ದರಪಟ್ಟಿದಾರ ಸಲ್ಲಿಸುವ ಇ.ಎಂ.ಡಿ./ಆಧಾರ ಮೊತ್ತವನ್ನು ಕೆಳಕಂಡ ಸಂಧರ್ಭಗಳಲ್ಲಿ ಮುಟ್ಟುಗೋಲು ಹಾಕಿಕೊಳ್ಳಬಹುದು.**

8.1 ದರಪಟ್ಟಿ ಸಲ್ಲಿಕೆ ಸಿಂಧುತ್ವದ ಅವಧಿಯಲ್ಲಿ ತನ್ನ ದರಪಟ್ಟಿಯನ್ನು ಹಿಂದಕ್ಕೆ ಪಡೆದಿದ್ದೇ ಆದರೆ

8.2 ಅಂಗೀಕಾರ ಆದ ಕಾರಣ ದರಪಟ್ಟಿದಾರನು ನಿಗದಿತ ಕಾಲಾವಧಿಯಲ್ಲಿ

ಅ) ಠೇವಣಿ ಹಣ ಪಾವತಿಸಿ ಒಪ್ಪಂದಕ್ಕೆ ಸಹಿ ಮಾಡದೇ ಇದ್ದರೆ

**ಅಥವಾ**

ಆ) ಅಗತ್ಯ ಕಾರ್ಯ ನಿರ್ವಹಣಾ ಭರವಸಾ ಪತ್ರ ನೀಡದಿದ್ದರೆ ಅಥವಾ ನಿಗಧಿತ ಅವಧಿಯೊಳಗೆ ನಿಗಧಿಪಡಿಸಿದ ಸಾಮರ್ಥ್ಯದ ವಾಹನ ಒದಗಿಸದಿದ್ದರೆ,

**9.0 ದಸ್ತಾವೇಜು ಮಾದರಿ ಹಾಗೂ ದರಪಟ್ಟಿಗೆ ಸಹಿ ಮಾಡುವುದು :**

9.1 ದರಪಟ್ಟಿ ಸಲ್ಲಿಕೆಗೆ ಸಂಬಂಧಿಸಿದಂತೆ ತಾನು ಖರೀದಿಸಿದ ದಸ್ತಾವೇಜು ಮಾದರಿ, ಅದನ್ನು ಸಿದ್ದಪಡಿಸಿ ಅಧಿಕೃತ ಮೂಲ ದಾಖಲೆಗಳೊಂದಿಗೆ ಪ್ರಸ್ತಾವನೆ ಸಲ್ಲಿಸುವುದು.

9.2 ದರಪಟ್ಟಿ ಸಲ್ಲಿಕೆಗೆ ಸಂಬಂಧಿಸಿದ ದಸ್ತಾವೇಜಿನ ಎಲ್ಲಾ ಪುಟಗಳಲ್ಲಿ ಅಧಿಕೃತವಾಗಿ ನಾಮ ನಿರ್ದೇಶನಗೊಂಡ ಗುತ್ತಿಗೆ ವ್ಯಕ್ತಿ ಸಹಿ ಮಾಡತಕ್ಕದ್ದು, ದಸ್ತಾವೇಜಿನ ಎಲ್ಲಾ ಪುಟಗಳಲ್ಲಿ ಹಾಗೂ ತಿದ್ದುಪಡಿ ಮಾಡಿದ ಕಡೆಗಳೆಲ್ಲೆಲ್ಲಾ ಭರ್ತಿಮಾಡಿದ ವ್ಯಕ್ತಿ ಅಥವಾ ನಾಮನಿರ್ದೇಶನಗೊಂಡ ವ್ಯಕ್ತಿ ಆತನ ಹೆಸರಿನ ಅಧ್ಯ–ಅಕ್ಷರದಲ್ಲಿ ಸಹಿಯನ್ನು ಹೆಚ್ಚುವರಿಯಾಗಿ ಮಾಡತಕ್ಕದ್ದು.

9.3 ದರಪಟ್ಟಿಯ ಪೂರ್ಣ ದಸ್ತಾವೇಜಿನಲ್ಲಿ ಯಾವುದೇ ಬದಲಾವಣೆ ಮಾಡತಕ್ಕದ್ದಲ್ಲ. ಹಾಗೂ ಅಳಿಸತಕ್ಕದ್ದಲ್ಲ. ಆದರೆ ಶಿವಮೊಗ್ಗ ಹಾಲು ಒಕ್ಕೂಟ ನೀಡಬಹುದಾದ ಸೂಚನೆಗಳಿಗೆ ಈ ಕಟ್ಟುಪಾಡು ಅನ್ವಯಿಸುವುದಿಲ್ಲ ಅಥವಾ ದರಪಟ್ಟಿದಾರ ಅಕಸ್ಮಾತಾಗಿ ಮಾಡಿರಬಹುದಾದ ತಪ್ಪುಗಳನ್ನು ಅಗತ್ಯವಾಗಿ ಸರಿಪಡಿಸಬಹುದಾಗಿರುತ್ತದೆ. ಅಂತಹ ಸಂದರ್ಭಗಳಲ್ಲಿ ದಸ್ತಾವೇಜಿನಲ್ಲಿ ಸಹಿ ಮಾಡುವ ಅಧಿಕೃತ ದರಪಟ್ಟಿದಾರ ತನ್ನ ಹೆಸರಿನ ಅಧ್ಯ–ಅಕ್ಷರಗಳ ಸಹಿ ಮಾಡತಕ್ಕದ್ದು, ಬರವಣಿಗೆಯ ಮೇಲೆ ಬರವಣಿಗೆ ಮಾಡಲು ಅನುಮತಿ ಇರುವುದಿಲ್ಲ.

**10.0 ದರಪಟ್ಟಿ ಸಲ್ಲಿಕೆಗೆ ಅಂತಿಮ ದಿನಾಂಕ ಪ್ರಕಟಣೆ :**

10.1 ದರಪಟ್ಟಿ ಸಲ್ಲಿಕೆಗೆ ಆಹ್ವಾನಿಸಿದ ಸಂದರ್ಭ ನಿಗದಿಪಡಿಸಿದ ದಿನಾಂಕ ಹಾಗೂ ವೇಳೆಯೊಳಗೆ ಸಂಬಂಧಪಟ್ಟ ದಸ್ತಾವೇಜನ್ನು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ತಲುಪಿಸತಕ್ಕದ್ದು.

10.2 ಶಿವಮೊಗ್ಗ ಹಾಲು ಒಕ್ಕೂಟವು ತನ್ನ ವಿವೇಚನೆಗೆ ಅಗತ್ಯ ಕಂಡು ಬಂದರೆ ಟೆಂಡರ್‌ನಲ್ಲಿ ಪ್ರಕಟಿಸಿದ ಅಂತಿಮ ದಿನಾಂಕವನ್ನು ಮುಂದೂಡಬಹುದಾಗಿರುತ್ತದೆ. ನಂತರ ತಿದ್ದುಪಡಿ ದಿನಾಂಕವನ್ನು ಪ್ರಕಟಿಸಲು ಶಿವಮೊಗ್ಗ ಹಾಲು ಒಕ್ಕೂಟವು ಹಾಗೂ ದರಪಟ್ಟಿದಾರರ ನಡುವಣ ತನ್ನ ಹಕ್ಕು ಹಾಗೂ ಬಾಧ್ಯತೆಯಿಂದ ಹಿಂದೆ ಪ್ರಕಟಿಸಿದ ಮೂಲ ಕೊನೆಯ ದಿನಾಂಕದ ಸಿಂಧುತ್ವವನ್ನು ರದ್ದುಗೊಳಿಸಿ, ಮುಂದೂಡಿದ ಹೊಸ ಅಂತಿಮ ದಿನಾಂಕವನ್ನು ಪ್ರಕಟಿಸಿ ಸಿಂಧುಗೊಳಿಸಬಹುದಾಗಿರುತ್ತದೆ.

**10.0 ತಡವಾಗಿ ಸಲ್ಲಿಕೆಯಾಗುವ ದರಪಟ್ಟಿ ದಸ್ತಾವೇಜುಗಳು :**

10.1 ಶಿವಮೊಗ್ಗ ಹಾಲು ಒಕ್ಕೂಟವು ಅಂತಿಮ ದಿನಾಂಕ ಹಾಗೂ ವೇಳೆ ಮೀರಿ ತಲುಪುವ ಯಾವುದೇ ದರಪಟ್ಟಿ ದಸ್ತಾವೇಜುಗಳನ್ನು ದರಪಟ್ಟಿ ಸಲ್ಲಿಕೆಗೆ ಆಹ್ವಾನಿಸಿದ ಸಂದರ್ಭದಲ್ಲಿ ಪ್ರಕಟಿಸಲಾದ ಅಂತಿಮ ದಿನಾಂಕ ಹಾಗೂ ವೇಳೆಯನ್ನು ಪರಿಗಣಿಸಿ ಹಾಗೂ ಕಾನೂನು ನಿಯಮದ ಹಿನ್ನೆಲೆಯಲ್ಲಿ ಅವುಗಳನ್ನು ತೆರೆಯದೆಯೇ, ದರಪಟ್ಟಿದಾರರಿಗೆ ಹಿಂದಿರುಗಿಸಲಾಗುವುದು.

**11.0 ದರಪಟ್ಟಿ ದಸ್ತಾವೇಜು ತೆರೆಯುವ ಕ್ರಮ :**

11.1 ಶಿವಮೊಗ್ಗ ಹಾಲು ಒಕ್ಕೂಟವು ದರಪಟ್ಟಿ ದಸ್ತಾವೇಜು ಸಲ್ಲಿಸಿದ ಎಲ್ಲಾ ದರಪಟ್ಟಿದಾರರ ಪ್ರತಿನಿಧಿಗಳ ಸಮ್ಮುಖದಲ್ಲಿ ಸೂಚಿಸಲಾಗಿದ್ದ ಅಂತಿಮ ದಿನಾಂಕ ಹಾಗೂ ವೇಳೆಗೆ ಅನುಗುಣವಾಗಿ ಈ ಪ್ರಕ್ರಿಯೆ ನಡೆಯುತ್ತದೆ. ಹಾಜರಾದ ದರಪಟ್ಟಿ ಸಲ್ಲಿಕೆದಾರರು ಅಥವಾ ಅವರ ಪ್ರತಿನಿಧಿಗಳು ಕಛೇರಿಯ ಕಡತದಲ್ಲಿ ತಮ್ಮ ಹಾಜರಾತಿಯನ್ನು ದೃಢೀಕರಿಸಲು ಹಾಜರಾತಿಗೆ ಸಹಿ ಹಾಕಬೇಕಾಗುತ್ತದೆ.

**12.0 ಜವಾಬ್ದಾರಿಯುತವಾಗಿ ಸಲ್ಲಿಕೆಯಾಗಿರುವ ಕುರಿತು ನಿರ್ಧಾರ :**

12.1 ದರಪಟ್ಟಿ ದಸ್ತಾವೇಜಿನ ವಿವರ ಮೌಲ್ಯಮಾಪನಕ್ಕೆ ಪೂರ್ವಭಾವಿಯಾಗಿ ಪ್ರತಿಯೊಂದು ದರಪಟ್ಟಿ ದಸ್ತಾವೇಜುಗಳು ಎಲ್ಲಾ ರೀತಿಯಿಂದಲೂ ಅಗತ್ಯಕ್ಕೆ ತಕ್ಕಂತೆ ಜವಾಬ್ದಾರಿಯುತವಾಗಿ ಸಲ್ಲಿಕೆ ಆಗಿದೆಯೇ ಎಂದು ನಿರ್ಧಾರ ಕೈಗೊಳ್ಳಲು ಶಿವಮೊಗ್ಗ ಹಾಲು ಒಕ್ಕೂಟವು ಮುಂದಾಗುತ್ತದೆ.

12.2 ನಿಯಮದ ರೀತ್ಯಾ ಇಂತಹ ನಿರ್ಧಾರ ಕೈಗೊಳ್ಳಲು ಎಲ್ಲಾ ರೀತಿಯಿಂದಲೂ ಜವಾಬ್ದಾರಿಯುತವಾಗಿ ಸಲ್ಲಿಕೆಯಾಗಿರುವ ದರಪಟ್ಟಿ ದಸ್ತಾವೇಜು ಎಂದು ಪರಿಗಣಿತವಾಗಲು ಅದು ವಿಧಿಸಲಾಗಿರುವ ನೀತಿ, ನಿಯಮಗಳಿಗೆ ವಿವರ ಮಾಹಿತಿಗೆ ಬದ್ಧವಾಗಿದ್ದು, ಯಾವುದೇ ರೀತಿಯಿಂದಲೂ ವ್ಯತ್ಯಯಗೊಳ್ಳದ ಹಾಗೂ ಕಾಯ್ದಿರಿಸಿದ ರೀತಿಯದ್ದಾಗಿರಬೇಕು. ವ್ಯತ್ಯಯ ಅಥವಾ ಕಾಯ್ದಿರಿಸುವಿಕೆಯಿಂದಾಗಿ ಅದರ ಆಶಯ ಅಥವಾ ಗುತ್ತಿಗೆಯ ಕಾರ್ಯವ್ಯೈಖರಿಯ ಮೇಲೆ ದುಷ್ಪರಿಣಾಮ ಬೀರುತ್ತದೆ. ಅಥವಾ ಕೆಲದೃಷ್ಟಿಯ ಇತಿಮಿತಿಗೊಳ್ಳುತ್ತದೆ. ಜೊತೆಗೆ ದರಪಟ್ಟಿ ದಸ್ತಾವೇಜಿನೊಂದಿಗೆ ಅಸಂಗತಗೊಳ್ಳುತ್ತದೆ. ಶಿವಮೊಗ್ಗ ಹಾಲು ಒಕ್ಕೂಟವು ಹಕ್ಕು ಅಥವಾ ದರಪಟ್ಟಿದಾರರ ಗುತ್ತಿಗೆ ಬಾಧ್ಯತೆ ಇವುಗಳ ಸುಧಾರಣೆ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತದೆ. ವ್ಯತ್ಯಯ ಹಾಗೂ ಕಾಯ್ದಿರಿಸುವಿಕೆ ಇತರೆ ಸ್ಪರ್ಧಾತ್ಮಕ ದರಪಟ್ಟಿದಾರರ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹಾಗಾಗಿ ಎಲ್ಲಾ ರೀತಿಯಿಂದಲೂ ಜವಾಬ್ದಾರಿಯುತ ದರಪಟ್ಟಿ ದಸ್ತಾವೇಜಿನ ಸಲ್ಲಿಕೆ ಆಗಬೇಕಾಗಿದೆ.

12.3 ದರಪಟ್ಟಿ ದಸ್ತಾವೇಜಿನ ಅಗತ್ಯಕ್ಕೆ ಅನುಗುಣವಾಗಿ ಜವಾಬ್ದಾರಿಯುತ ಪ್ರತಿಕ್ರಿಯೆ ಇಲ್ಲವಾದಲ್ಲಿ ಅಂತಹವನ್ನು ಶಿವಮೊಗ್ಗ ಹಾಲು ಒಕ್ಕೂಟವು ತಿರಸ್ಕರಿಸುತ್ತದೆ. ಅನಧಿಕೃತ ವ್ಯತ್ಯಯ ಅಥವಾ ಕಾಯ್ದಿರಿಸುವಿಕೆಯನ್ನು ಸರಿಪಡಿಸಲು ಹಿಂತಿರುಗಿ ಪಡೆದುದ್ದನ್ನು ಮತ್ತೆ ಜವಾಬ್ದಾರಿಯುತಗೊಳಿಸಲಾಗುವುದಿಲ್ಲ.

**13.0 ಶಿವಮೊಗ್ಗ ಹಾಲು ಒಕ್ಕೂಟ ಯಾವುದೇ ದರಪಟ್ಟಿ ದಸ್ತಾವೇಜನ್ನು ಸ್ವೀಕರಿಸುವುದಕ್ಕೂ ತಿರಸ್ಕರಿಸುವುದಕ್ಕೂ ಅಥವಾ ಎಲ್ಲವನ್ನು ಸಾರಾ ಸಗಟಾಗಿ ತಿರಸ್ಕರಿಸುವುದಕ್ಕೂ ಹಕ್ಕುಳ್ಳದ್ದಾಗಿರುತ್ತದೆ.**

13.1 ಮೇಲಿನ ವಿಷಯಗಳನ್ನು ಪೂರೈಸಲಾಗದ ದಸ್ತಾವೇಜನ್ನು ಯಾವುದೇ ಸಮಯದಲ್ಲಿ ಗುತ್ತಿಗೆ ನೀಡಿಕೆಗೆ ಪೂರ್ವಭಾವಿಯಾಗಿ ತಿರಸ್ಕರಿಸುವ ಅಥವಾ ಸ್ವೀಕರಿಸುವ, ಇಲ್ಲವೇ ಪ್ರಕ್ರಿಯೇಯನ್ನೇ ರದ್ದುಪಡಿಸುವ ಹಾಗೂ ಸಾರಾಸಗಟಾಗಿ ಎಲ್ಲವನ್ನೂ ತಿರಸ್ಕರಿಸುವ ಹಕ್ಕನ್ನು ಶಿವಮೊಗ್ಗ ಹಾಲು ಒಕ್ಕೂಟ ಕಾಯ್ದಿರಿಸಿಕೊಂಡಿದೆ. ಪರಿಣಾಮಕ್ಕೆ ಗುರಿಯಾಗುವ ದರಪಟ್ಟಿದಾರರಿಗೆ ಯಾವುದೇ ರೀತಿಯ ಉಪಶಮನಕ್ಕೂ ಬದ್ಧವಾಗದೆ ಮಾಹಿತಿಯನ್ನು ನೀಡಬೇಕಾದ ಹೊಣೆಗಾರಿಕೆಯು ಇಲ್ಲದೇ ಕ್ರಮ ತೆಗೆದುಕೊಳ್ಳಲು ಶಿವಮೊಗ್ಗ ಹಾಲು ಒಕ್ಕೂಟ ಹಕ್ಕುಳ್ಳದ್ದಾಗಿದೆ.

**14.0 ಗುತ್ತಿಗೆ ನೀಡಿಕೆ :**

14.1 ದರಪಟ್ಟಿ ದಸ್ತಾವೇಜು ಹಲವು ದೃಷ್ಟಿಯಿಂದ ಜವಾಬ್ದಾರಿಯುತವಾದುದು ಎಂದು ಪರಿಗಣಿತವಾಗಿ ಕನಿಷ್ಟ ದರವನ್ನು ದರಪಟ್ಟಿಯಲ್ಲಾಗಲೀ ಅಥವಾ ಸಂಧಾನದಲ್ಲಾಗಲೀ ಸೂಚಿಸಿರುವುದರಿಂದ ಶಿವಮೊಗ್ಗ ಹಾಲು ಒಕ್ಕೂಟವು ನಿಯಮ 15 ರ ಅಡಿಯಲ್ಲಿ ದರಪಟ್ಟಿದಾರನಿಗೆ ಗುತ್ತಿಗೆ ನೀಡಬಹುದಾಗಿರುತ್ತದೆ. ಹಲವು ದೃಷ್ಟಿಯಿಂದ ಜವಾಬ್ದಾರಿಯುತವಾದವು ಎಂದು ಪರಿಗಣಿತವಾದ ದರಪಟ್ಟಿ ದಸ್ತಾವೇಜಿನ ತೌಲನಿಕ ತಃಖ್ತೆ ಮೂಲಕ ಮೌಲ್ಯಮಾಪನ ಮಾಡಲಾಗದೆ ಹಾಗೂ ಗುತ್ತಿಗೆ ಕಾಮಗಾರಿಯನ್ನು ಪರಿಣಾಮಯುತವಾಗಿ ನಿರ್ವಹಿಸಬಲ್ಲೆ ಎಂಬ ಸಾಮರ್ಥ್ಯ ಹಾಗೂ ಸಂಪನ್ಮೂಲದ ಬಗೆಗೆ ದೃಢೀಕರಣ ಒದಗಿಸಿದರೆ ಗುತ್ತಿಗೆಯನ್ನು ನೀಡಬಹುದಾಗಿರುತ್ತದೆ.

14.2 ಶಿವಮೊಗ್ಗ ಹಾಲು ಒಕ್ಕೂಟವು ನಾಮಮಾತ್ರ ಸದಸ್ಯತ್ವಕ್ಕಾಗಿ ನಿಗದಿತ ಮೊತ್ತ ಪಾವತಿಸಿದ ಅವರು / ಅವಳು ಪಡೆದುಕೊಂಡ ನಂತರ ಗುತ್ತಿಗೆಯನ್ನು ನೀಡಬಹುದಾಗಿರುತ್ತದೆ.

**ಟೆಂಡರ್‌ದಾರರ ಸಹಿ ಮತ್ತು ಹೆಸರು**

(ದಪ್ಪ ಅಕ್ಷರಗಳಲ್ಲಿ)

**ವಿಶೇಷ ಸೂಚನೆ :**

1) ಗುತ್ತಿಗೆ ವರ್ಗಾವಣೆಗೆ ಅವಕಾಶವಿರುವುದಿಲ್ಲ. ಆದರೂ ಸಹ ಅನಿವಾರ್ಯ ಸಂದರ್ಭದಲ್ಲಿ ಕಚೇರಿಯಿಂದ ಆದೇಶ ಪಡೆದು ವಾಹನ ಓಡಿಸಿದ ಕನಿಷ್ಟ ಮೂರು ತಿಂಗಳ ನಂತರ ನಿಯಾಮಾನುಸಾರ ವರ್ಗಾವಣೆ ಶುಲ್ಕ ಪಾವತಿಸಿದಲ್ಲಿ ಒಂದು ಬಾರಿ ಮಾತ್ರ ಮಾಡಲಾಗುವುದು.

2) ಈ ಟೆಂಡರ್‌ನಲ್ಲಿ ಒಂದು ಮಾರ್ಗದ ಗುತ್ತಿಗೆಯಲ್ಲಿ, ಭಾಗವಹಿಸುವ ವಾಹನ ಇನ್ನೊಂದು ಮಾರ್ಗದ ಗುತ್ತಿಗೆಯಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ ಹಾಗೂ ಹಾಲಿ ಇರುವ ಗುತ್ತಿಗೆದಾರರು ಇನ್ನೂ ಟೆಂಡರ್ ಅವಧಿ ಮುಗಿಯದೇ ಇರುವ ಮಾರ್ಗಗಳಿಗೆ ನೀಡಿರುವ ವಾಹನ ದಾಖಲಾತಿಗಳನ್ನು ಈ ಟೆಂಡರಿಗೆ ಸಲ್ಲಿಸುವಂತಿಲ್ಲ.

ಈ ಮೇಲೆ ತಿಳಿಸಿರುವಂತೆ ಟೆಂಡರ್ ಒಪ್ಪಿಗೆಯಾದಲ್ಲಿ ಆಯಾ ಮಾರ್ಗದ ಮುಂದೆ ಸೂಚಿಸಿದ ಭದ್ರತಾ ಠೇವಣಿ ನೀಡಲು ಒಪ್ಪಿರುತ್ತೇನೆ.

**ಟೆಂಡರ್‌ದಾರರ ಸಹಿ ಮತ್ತು ಹೆಸರು**

(ದಪ್ಪ ಅಕ್ಷರಗಳಲ್ಲಿ)

**1.0 ಗುತ್ತಿಗೆ ನಿಯಮ ನಿಬಂಧನೆಗಳು :**

ಗುತ್ತಿಗೆದಾರರು ಸಾಗಾಣಿಕೆದಾರರು ಅವರಿಗೆ ಈ ಉದ್ದೇಶದಿಂದ ಒಪ್ಪಿಸಿರುವ ನಿಗದಿತ ಮಾರ್ಗಗಳಲ್ಲಿ ಹಾಲಿನ ಪುಡಿಯನ್ನು ವೇಳಾಪಟ್ಟಿಯಂತೆ ಪೂರೈಕೆ ಮಾಡತತಕ್ಕದ್ದು.

1. ಗುತ್ತಿಗೆದಾರ ತನಗೆ ದತ್ತವಾದ ಗುತ್ತಿಗೆಯನ್ನು ಮತ್ತೊಬ್ಬರಿಗೆ ವರ್ಗಾಯಿಸಲು ಅವಕಾಶವಿರುವುದಿಲ್ಲ. ಆದರೂ ಸಹ ಅನಿವಾರ್ಯ ಸಂದರ್ಭದಲ್ಲಿ ಆದೇಶ ಪಡೆದು ವಾಹನ ಓಡಿಸಿದ ಕನಿಷ್ಟ ಮೂರು ತಿಂಗಳ ನಂತರ ನಿಯಾಮಾನುಸಾರ ವರ್ಗಾವಣೆ ಶುಲ್ಕ ಪಾವತಿಸಿದಲ್ಲಿ ಒಂದು ಬಾರಿ ಮಾತ್ರ ವರ್ಗಾವಣೆ ಮಾಡಲಾಗುವುದು.

2. ಶಿವಮೊಗ್ಗ ಹಾಲು ಒಕ್ಕೂಟವು ತನ್ನ ಅಂತಿಮ ಆದೇಶದಲ್ಲಿ ಸೂಚಿತ ದಿನಾಂಕದಿಂದು ಆರಂಭಗೊಂಡು ಆರು ತಿಂಗಳು/ಒಂದು ವರ್ಷದ ಅವಧಿಗೆ ಸಾಗಾಣಿಕೆ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು. ಅಥವಾ ಡೇರಿಯು ತನ್ನ ವಿವೇಚನೆಗೆ ಸರಿಯೆಂದು ಕಂಡುಬಂದಲ್ಲಿ ಎಂಥದೇ ಸಂದರ್ಭದಲ್ಲಿ ಯಾವುದೇ ಕಾರಣ ನೀಡದೇ ಸಾಗಾಣಿಕೆ ಕಾಮಗಾರಿಯ ಅವಧಿಯನ್ನು ಕಡಿಮೆ ಅವಧಿಗೆ ನಿಗದಿಪಡಿಸಲು ಅಧಿಕಾರ ಉಳ್ಳದ್ದಾಗಿರುತ್ತದೆ.

3. ಸಾಗಾಣಿಕೆ ಕಾಮಗಾರಿಯಲ್ಲಿ ವಿಮುಖನಾದ ಗುತ್ತಿಗೆದಾರನನ್ನು ಅವಧಿಗೆ ಮುಂಚೆಯೇ ವಜಾ ಮಾಡಿದರೆ ಅಂತಹವನು ಇರಿಸಿರುವ ಇಡು ಹಣವನ್ನು ಭಾಗಶಃ ಅಥವಾ ಪೂರ್ಣ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವ ಬಗ್ಗೆ ಯಾವುದು ಸರಿಯೆಂದು ಶಿವಮೊಗ್ಗ ಹಾಲು ಒಕ್ಕೂಟವು ನಿರ್ಧರಿಸುತ್ತದೆ.

4. ಗುತ್ತಿಗೆದಾರರಿಗೆ ವಹಿಸಿರುವ ಹಾಲಿನ ಪುಡಿ ಸಾಗಾಣಿಕೆ ಮಾರ್ಗಗಳಲ್ಲಿ ಕೆಲವು ಗುತ್ತಿಗೆದಾರರ ಅಥವಾ ಎಲ್ಲಾ ಗುತ್ತಿಗೆದಾರರ ಅಂಗೀಕಾರ ಪಡೆದ ಸಾಗಾಣಿಕೆ ಅವಧಿಯಲ್ಲಿ ಯಾವ ಸಮಯದಲ್ಲಿ ಬೇಕಾದರೂ ಅಮಾನತು ಆಜ್ಞೆಯನ್ನು ಶಿವಮೊಗ್ಗ ಹಾಲು ಒಕ್ಕೂಟ ಹಿಂದಕ್ಕೆ ಪಡೆಯಲು ಅಧಿಕಾರ ಉಳದ್ದಾಗಿರುತ್ತದೆ.

6. ಶಿವಮೊಗ್ಗ ಹಾಲು ಒಕ್ಕೂಟ ಸೂಚಿಸುವ ನಿರ್ದಿಷ್ಟ ದಿನಾಂಕದಿಂದ ಹಾಲಿನ ಪುಡಿ ವಿತರಣಾ ಮಾರ್ಗದಲ್ಲಿ ಕೆಲವು ಅಥವಾ ಎಲ್ಲಾ ಮಾರ್ಗದಲ್ಲಿ ಶಿವಮೊಗ್ಗ ಹಾಲು ಒಕ್ಕೂಟವು ಸೂಚಿಸುವ ಗುತ್ತಿಗೆ ದರದನ್ವಯ ಸಾಗಾಣಿಕೆ ಕಾಮಗಾರಿಯನ್ನು ಪುನಾರಂಭಿಸಬಹುದಾಗಿರುತ್ತದೆ.

7. ಸಾಗಾಣಿಕೆ ಕಾಮಗಾರಿಯನ್ನು ಅಮಾನತುಗೊಳಿಸಿದ ಕಾರಣಕ್ಕಾಗಿ ಗುತ್ತಿಗೆದಾರರಿಗೆ ಪರಿಹಾರ ಧನವನ್ನು ನೀಡಲಾಗುವುದಿಲ್ಲ.

8. ಒಪ್ಪಂದವಾದ ಅರ್ಹ ಗುತ್ತಿಗೆ ಅವಧಿ ಮುಕ್ತಾಯವಾದ ಮೇಲೂ 3 ತಿಂಗಳಿಗೆ ಮೀರದಂತೆ ಗುತ್ತಿಗೆ ಅವಧಿಯನ್ನು ವಿಸ್ತರಿಸಲು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಅವಕಾಶವಿರುತ್ತದೆ.

9. ಗುತ್ತಿಗೆದಾರ ತನ್ನ ಸ್ವಂತ ವಾಹನವನ್ನು ಸಾಗಾಣಿಕೆ ಕಾಮಗಾರಿಗೆ ಓಡಿಸತಕ್ಕದ್ದು, ಹಾಗೂ ವಾಹನಕ್ಕೆ ಸಂಬಂಧಪಟ್ಟ ನೋಂದಣಿ, ನೋಂದಾವಣೆ ಪ್ರಮಾಣ ಪತ್ರ ತೆರಿಗೆ ಪಾವತಿ ರಶೀದಿ, ವಿಮಾ ಪ್ರಮಾಣ ಪತ್ರ ಹಾಗೂ ಇತರ ಎಲ್ಲಾ ಅಗತ್ಯ ಪ್ರಮಾಣ ಪತ್ರಗಳೂ, ಕಾಗದ ಪತ್ರಗಳ ಮೂಲ ಪ್ರತಿಯನ್ನು ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರ ಸಮ್ಮುಖದಲ್ಲಿ ಹಾಜರು ಪಡಿಸಿ ಸ್ವಂತ ವಾಹನವೆಂದು ದೃಡಪಡಿಸಿ ಸಾಗಾಣಿಕೆ ಕಾಮಗಾರಿಯ ಗುತ್ತಿಗೆ ಕಾರ್ಯಕ್ಕೆ ಪ್ರವೇಶಿಸಬೇಕಾಗುತ್ತದೆ ಮಾರ್ಗದಲ್ಲಿ ಸಮರ್ಥವಾಗಿ ಓಡಬಲ್ಲದೆಂದು ದೃಢಪಡಿಸಬೇಕಾಗುತ್ತದೆ. ಶಿವಮೊಗ್ಗ ಹಾಲು ಒಕ್ಕೂಟವು ಕೆಲ ವಾಹನಗಳು ಸಮರ್ಥವಲ್ಲವೆಂದು ಪರಿಗಣಸಿದರೆ ಅಂತಹ ವಾಹನಗಳನ್ನು ಬದಲಿಸುತ್ತೇನೆಂದು ಪ್ರಮಾಣಿಸಿದ ನಂತರ ಗುತ್ತಿಗೆ ಕಾರ್ಯ ಕೈಗೊಳ್ಳಬಹುದಾಗಿರುತ್ತದೆ.

10. ಪುರಸಭೆಯಿಂದ/ನಗರ ಸಭೆಯ ವತಿಯಿಂದ ಆಹಾರ ಪದಾರ್ಥಗಳನ್ನು ತನ್ನ ವಾಹನದಲ್ಲಿ ಸಾಗಾಣಿಕೆ ಮಾಡಬಹುದು ಎಂದು ಪುರಸಭೆಯಿಂದ/ನಗರ ಸಭೆಯ ಆರೋಗ್ಯ ಇಲಾಖೆಯಿಂದ ಅಗತ್ಯ ಅನುಮತಿ ಪತ್ರ ಪಡೆದಿರುವುದನ್ನು ಗುತ್ತಿಗೆದಾರ ಹಾಜರುಪಡಿಸತಕ್ಕದ್ದು.

11. ಗುತ್ತಿಗೆ ವಾಹನಕ್ಕೆ ಸಂಬಂಧಿಸಿದಂತೆ ಗುತ್ತಿಗೆದಾರ ಈ ಕೆಳಗೆ ಸೂಚಿಸಿರುವ ಅಗತ್ಯಗಳನ್ನು ಹಾಗೂ ನಿರ್ದಿಷ್ಟ ಮಾಹಿತಿಗಳನ್ನು ಪೂರೈಕೆ ಮಾಡುತ್ತೇನೆ ಎಂದು ಒಪ್ಪಿಗೆ ಸೂಚಿಸತಕ್ಕದ್ದು.

12. ಕಾರ್ಮಿಕ ಕಾನೂನು ವರ್ಕ್ಸ್‌ಮೆನ್ಸ್ ಕಾಂಪನ್ಸೇಷನ್ ಆಕ್ಟ್ ಅಥವಾ ಇತರೇ ಶಾಸನ ಬದ್ದ ಕಾಯಿದೆ, ನಿಯಮ ನಿಬಂಧನೆಗಳ ಷರತ್ತುಗಳನ್ನು ಪಾಲಿಸಬೇಕಾದ ಜವಾಬ್ದಾರಿ ಗುತ್ತಿಗೆದಾರನ ಮೇಲೆ ಸಂಪೂರ್ಣವಾಗಿ ಇರುತ್ತದೆ.

13. ನಿಗಧಿಪಡಿಸಿರುವ ಸಾಗಾಣಿಕೆ ಮಾರ್ಗದಲ್ಲಿ ಓಡಾಡುವ ವಾಹನ ಚಲಿಸಲು ಸಾಧ್ಯವಾಗದೆ ಕೆಟ್ಟುನಿಂತರೆ 30 ನಿಮಿಷಗಳೊಗಾಗಿ ಬದಲಿ ವಾಹನವನ್ನು ಖಚಿತವಾಗಿ ವ್ಯವಸ್ಥೆ ಮಾಡಬೇಕಾದ ಹೊಣೆಗಾರಿಕೆ ಗುತ್ತಿಗೆದಾರನದಾಗಿರುತ್ತದೆ.

14. ಶಿವಮೊಗ್ಗ ಹಾಲು ಒಕ್ಕೂಟದ ನೌಕರ ವರ್ಗ, ಅಧಿಕೃತ ಪ್ರತಿನಿಧಿಗಳು, ಗುತ್ತಿಗೆದಾರನ ವಾಹನಗಳಲ್ಲಿ ಗುತ್ತಿಗೆದಾರನ ಸಿಬ್ಬಂದಿಯ ಜೊತೆಗೆ ಉಚಿತವಾಗಿ ಪ್ರಯಾಣಿಸಲು ಅನುಮತಿಯನ್ನು ಗುತ್ತಿಗೆದಾರ ನೀಡತಕ್ಕದ್ದು.

15. ಗುತ್ತಿಗೆ ಕಾರ್ಯನಿರ್ವಹಿಸುತ್ತಿರುವ ಸಂದರ್ಭದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ನೌಕರ ವರ್ಗ ಅಥವಾ ಗುತ್ತಿಗೆದಾರ ಸಾಗಾಣಿಕೆ ಹಾಗೂ ಭರ್ತಿಮಾಡಲು ಇಳಿಸಲು ನೇಮಿಸಿಕೊಂಡಿರುವ ಸಿಬ್ಬಂದಿಗಳನ್ನು ಹೊರತುಪಡಿಸಿ ಮತ್ತಾರನ್ನೂ ಈ ಕಾರ್ಯಕ್ಕೆ ನೇಮಕ ಆಗಿರುವ ವಾಹನಗಳಲ್ಲಿ ಸಂಚರಿಸಲು ಅವಕಾಶ ನೀಡತಕ್ಕದ್ದಲ್ಲ.

16. ಸಾಗಾಣಿಕೆಗೆ ಅನುಮತಿ ನೀಡಿರುವ ಸಾಮಾಗ್ರಿಗಳನ್ನಲ್ಲದೆ ಮತ್ತಾವುದೇ ಸಾಮಾಗ್ರಿಗಳನ್ನು ಈ ವಾಹನದಲ್ಲಿ ಸಾಗಿಸತಕ್ಕದ್ದಲ್ಲ.

17. ಶಿವಮೊಗ್ಗ ಹಾಲು ಒಕ್ಕೂಟವು ನಿರ್ದಿಷ್ಟಪಡಿಸಿದ ವೇಳೆಯಲ್ಲಿ, ಗುತ್ತಿಗೆದಾರ ವಾಹನಗಳನ್ನು ಪೂರೈಸತಕ್ಕದ್ದು. ಗುತ್ತಿಗೆದಾರನಿಗೆ ಅಲ್ಪಕಾಲೀನ ಸೂಚನೆ ನೀಡಿ ವೇಳೆ ಬದಲಿಸುವ ಹಕ್ಕು ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಇರುತ್ತದೆ.

18. ಗಲಭೆಗಳಿಂದಾಗಿ ನಾಗರೀಕರ ಪ್ರತಿಭಟನೆ, ಕಾರ್ಮಿಕರ ಮುಷ್ಕರ/ಹೋರಾಟದಿಂದಾಗಿ ಅಥವಾ ಬಂದ್ ಸಮಯದಲ್ಲಿ, ಗುತ್ತಿಗೆದಾರನ ವಾಹನ ಜಖಂಗೊಂಡರೆ ಗುತ್ತಿಗೆದಾರ ಪರಿಹಾರ ಕೇಳುವ ಹಾಗಿಲ್ಲ. ಸಂಸ್ಥೆಯ ಒಳ ಆವರಣದಲ್ಲಿ ಅಥವಾ ಹೊರ ಆವರಣದಲ್ಲಿ ಹೊರಗಿನವರಿಂದಾಗಲೀ ಜಖಂ ಆಗಬಹುದು.

19. ಈ ಗುತ್ತಿಗೆಯಲ್ಲಿ ಗುತ್ತಿಗೆದಾರ ಅರಿತಿರಬೇಕಾದುದು ಈ ಅಂಶವನ್ನು ಹಾಲಿನ ಪುಡಿಯನ್ನು ನಿರಂತರವಾಗಿ ಯಾವುದೇ ಅಡೆತಡೆ ಇಲ್ಲದೆ ಸರಬರಾಜು ಮಾಡುತ್ತಿರಬೇಕು. ಕಾನೂನು ಸುವ್ಯವಸ್ಥೆಯ ಸಂದರ್ಭದಲ್ಲಾಗಲೀ, ಹವಾಮಾನ ವೈಪರೀತ್ಯದಿಂದಾಗಲೀ ಸರಬರಾಜಿನಲ್ಲಿ ವ್ಯತ್ಯಯವಾಗದಂತೆ ನಿಗದಿಪಡಿಸಿರುವ ಎಲ್ಲಾ ಮಾರ್ಗಗಳಲ್ಲಿ ನಿರಂತರವಾಗಿ ಸರಬರಾಜು ಆಗುತ್ತಿರಬೇಕು.

20. ಮಿಲಿಟರಿ ಹಾಗೂ ನಾಗರೀಕ ಅಧಿಕಾರವು ಕರ್ಫ್ಯೂ ವಿಧಿಸಿರುವ ಸಂದರ್ಭದಲ್ಲಿ ಯಾವುದೇ ನಿರ್ಬಂಧ ಹಾಕಿರುವ ಸಂದರ್ಭದಲ್ಲಿ ವಾಹನ ಓಡಾಟಕ್ಕೆ ನಿರ್ಬಂಧವನ್ನು ಹೊರಿಸಿರುವ ಸಂದರ್ಭದಲ್ಲಿ ಶಿವಮೊಗ್ಗ ಹಾಲು ಒಕ್ಕೂಟವು ಯಾರಿಂದ ವಾಹನ ಓಡಾಟಕ್ಕೆ ಅನುಮತಿ ಪಡೆಯಬೇಕೋ ಅಂತ ಅಧಿಕೃತ ಅಧಿಕಾರಿಗಳಿಂದ ಅನುಮತಿ ಪಡೆದು ವಾಹನ ಹಾಗೂ ಸಿಬ್ಬಂದಿಯ ಚಲನವಲನಕ್ಕೆ ಅವಕಾಶ ಕಲ್ಪಿಸಿಕೊಡುತ್ತದೆ.

21. ಗುತ್ತಿಗೆದಾರನ ನೌಕರ, ಪ್ರತಿನಿಧಿ ಸಾಗಾಣಿಕೆಗೆ ನೀಡಿರುವ ಹಾಲಿನ ಪುಡಿಯನ್ನು ಕದಿಯುತ್ತಿದ್ದರೆ ಮತ್ತು ಹಾಳು ಮಾಡುತ್ತಿದ್ದರೆ ಅದು ಸಾಗಾಣಿಕೆ ಸಂದರ್ಭದಲ್ಲಿ ಭರ್ತಿಮಾಡುವ, ಇಳಿಸುವ ಸಂದರ್ಭದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ಆವರಣದಲ್ಲಿಯೇ ಅಥವಾ ವಿತರಣಾ ಕೇಂದ್ರಗಳಲ್ಲಿ ಆಗುತ್ತಿದ್ದರೆ ಇದರಿಂದಾಗುವ ನಷ್ಟ ಹಾಗೂ ಹಾಳಾಗುವುದಕ್ಕೆ ಗುತ್ತಿಗೆದಾರನೇ ಹೊಣೆಯಾಗುತ್ತಾನೆ. ಹಾಗೂ ಆದ ನಷ್ಟವನ್ನು ಗುತ್ತಿಗೆದಾರ ಭರಿಸತಕ್ಕದ್ದು, ಇಲ್ಲವೇ ಶಿವಮೊಗ್ಗ ಹಾಲು ಒಕ್ಕೂಟ ತನ್ನ ವಿವೇಚನೆಗೆ ಸರಿಕಂಡುಬಂದರೆ ಗುತ್ತಿಗೆದಾರ ಇರಿಸಿರುವ ಇಡು ಹಣವನ್ನು ಮುಟ್ಟುಗೋಲು ಹಾಕಿಕೊಳ್ಳುವುದು ಅಥವಾ ಗುತ್ತಿಗೆಯನ್ನೇ ವಜಾ ಮಾಡಬಹುದಾಗಿರುತ್ತದೆ ಅಥವಾ ಸೂಕ್ತ ದಂಡ ವಿಧಿಸಲಾಗುವುದು.

22. ಗುತ್ತಿಗೆದಾರನ ನೌಕರ/ಪ್ರತಿನಿಧಿ ಶಿವಮೊಗ್ಗ ಹಾಲು ಒಕ್ಕೂಟವು ನೌಕರರೊಂದಿಗೆ ಸಾರ್ವಜನಿಕರೊಂದಿಗೆ ತಪ್ಪಾಗಿ ನಡೆದುಕೊಂಡರೆ ಅಕ್ರಮ ವ್ಯವಹಾರಗಳಲ್ಲಿ ತೊಡಗಿದರೆ ಅಂತಹ ನೌಕರನನ್ನು ಸಾಗಾಣಿಕೆ ಕಾರ್ಯದಿಂದ ತೆಗೆದುಹಾಕಿ ಎಂದು ಶಿವಮೊಗ್ಗ ಹಾಲು ಒಕ್ಕೂಟವು ಸೂಚಿಸಬಹುದು. ಹಾಗೆ ಸೂಚಿಸಿದಾಗ ಗುತ್ತಿಗೆದಾರ ಅಂತಹ ಅನಪೇಕ್ಷಿತ ವ್ಯಕ್ತಿಯನ್ನು ಕೂಡಲೇ ಕೆಲಸದಿಂದ ತೆಗೆದುಹಾಕಬೇಕು. ಅವನನ್ನು ಶಿವಮೊಗ್ಗ ಹಾಲು ಒಕ್ಕೂಟದ ಇದೇ ಗುತ್ತಿಗೆದಾರರನಾಗಲೀ, ಇತರೇ ಗುತ್ತಿಗೆದಾರನಾಗಲೀ ಮತ್ತೆ ಕೆಲಸಕ್ಕೆ ನೇಮಕ ಮಾಡಿಕೊಳ್ಳಬಾರದು.

23. ಗುತ್ತಿಗೆದಾರನ ವಾಹನ ಸಾಗಾಣಿಕೆ ಕಾರ್ಯಕ್ಕೆ ಶಿವಮೊಗ್ಗ ಹಾಲು ಒಕ್ಕೂಟದ ಆವರಣಕ್ಕೆ ಪ್ರವೇಶಿಸುವ, ನಿರ್ಗಮಿಸುವ, ಓಡಾಡುವ ಸಂದರ್ಭದಲ್ಲಿ ಶಿವಮೊಗ್ಗ ಹಾಲು ಒಕ್ಕೂಟದ ಕಟ್ಟಡದ ಆಸ್ತಿಗೆ ಹಾನಿಯಾಗದಂತೆ ಎಚ್ಚರವಹಿಸತಕ್ಕದ್ದು. ಹಾಗಲ್ಲದೆ ನಷ್ಟ ಉಂಟುಮಾಡಿದರೆ, ನಷ್ಟದ ಮೊತ್ತವನ್ನು ಅವರ ಬಿಲ್ಲಿನಲ್ಲಿ ಕಡಿತಮಾಡಿ ಅಥವಾ ಇತರ ಅಗತ್ಯ ಕ್ರಮದಿಂದ ವಸೂಲು ಮಾಡಲಾಗುವುದು.

24. ಗುತ್ತಿಗೆದಾರನ ವಾಹನ ಶಿವಮೊಗ್ಗ ಹಾಲು ಒಕ್ಕೂಟದ ಆವರಣಕ್ಕೆ ಬರುವ ಹಾಗು ಹೊರ ಹೋಗುವ ಇಲ್ಲವೇ ಆವರಣದಲ್ಲಿರುವ ಅನುಮತಿಯುಳ್ಳ ವ್ಯಕ್ತಿಯನ್ನು ಗಾಯಗೊಳಿಸುವುದು ಅಥವಾ ಸಾವಿಗೆ ಕಾರಣವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು.

25. ಶಿವಮೊಗ್ಗ ಹಾಲು ಒಕ್ಕೂಟದ ಸಿಬ್ಬಂದಿಗೆ/ ಅನುಮತಿಯುಳ್ಳ ವ್ಯಕ್ತಿಗೆ ಉಂಟಾಗಬಹುದಾದ ಗಾಯ, ಅದರಿಂದ ಡೇರಿಯ ನೌಕರರ ಪರಿಹಾರ ನೀಡಿಕೆ ನಿಯಮದಡಿ ಇತರೆ ಯಾವುದೇ ಕಾನೂನಿನಡಿ ಜಾರಿಯಲ್ಲಿರುವ ನಿಬಂಧನೆ ಅಧಿನಿಯಮದಡಿ ಪರಿಹಾರ ಧನವನ್ನು ಗುತ್ತಿಗೆದಾರ ಭರಿಸತಕ್ಕದ್ದು.

26. ಈ ಗುತ್ತಿಗೆಯಡಿ ತನಗೆ ದತ್ತವಾಗಿರುವ ಹಕ್ಕು ಬಾಧ್ಯತೆಯನ್ನು ಇತರ ವ್ಯಕ್ತಿಗೆ ವಹಿಸಿಕೊಡತಕ್ಕದ್ದಲ್ಲ.

27. ಈ ಗುತ್ತಿಗೆಯಡಿ ಆತನಿಗೆ ವಹಿಸಿರುವ ಸಾಗಾಣಿಕೆ ಕಾಮಗಾರಿಯನ್ನು ನಿರ್ವಹಿಸಲು ವಿಫಲನಾದಲ್ಲಿ ಅಥವಾ ಸಾಗಾಣಿಕೆಯ ಪೂರ್ಣ ಕಾರ್ಯವನ್ನು ಕೈಗೊಳ್ಳದಿದ್ದಲ್ಲಿ ಅಥವಾ ಭಾಗಶಃ ನಿರ್ವಹಿಸದಿದ್ದಲ್ಲಿ ಶಿವಮೊಗ್ಗ ಹಾಲು ಒಕ್ಕೂಟವು ವಿಧಿಸಿರುವ ನಿಯಮ ನಿಬಂಧನೆಯಡಿ ಈ ಕೆಳಕಂಡಂತೆ ಕ್ರಮ ಕೈಗೊಳ್ಳಬಹುದಾಗಿದೆ.

ಎ) ಗುತ್ತಿಗೆಯನ್ನು ವಜಾ ಮಾಡಬಹುದು ಅಥವಾ ಯಾವುದೇ ಭಾಗದ ಕಾರ್ಯವನ್ನು ಅಥವಾ

ಬಿ) ಆಧಾರ ಮೊತ್ತವನ್ನು ಪೂರ್ಣ ಮುಟ್ಟುಗೋಲು ಅಥವಾ ಶಿವಮೊಗ್ಗ ಹಾಲು ಒಕ್ಕೂಟ ದಿಂದ ಉಂಟಾದ ನಷ್ಟದ ಪ್ರಮಾಣಕ್ಕೆ ಸರಿದೂಗಿಸುವಷ್ಟು ಹಾಗೂ ಅಥವಾ

ಸಿ) ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಉಂಟಾದ ನಷ್ಟದ ಪ್ರಮಾಣವನ್ನು ಪಾವತಿಸುವಂತೆ ಗುತ್ತಿಗೆದಾರರಿಗೆ ಸೂಚಿಸುವುದು.

ಡಿ) ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಉಂಟಾದ ನಷ್ಟವನ್ನು ಗುತ್ತಿಗೆದಾರರು ಬೇರೆ ಮಾರ್ಗದಲ್ಲಿ ವಾಹನ ಒದಗಿಸಿದ್ದರೆ ಅದರಿಂದ ಸರಿದೂಗಿಸಿಕೊಳ್ಳಲಾಗುವುದು.

28. ಗುತ್ತಿಗೆದಾರರು ಗುತ್ತಿಗೆ ಅವಧಿಯಲ್ಲಿ ಅಕಾಲ ಮರಣಹೊಂದಿದಲ್ಲಿ ಸಾಗಾಣಿಕೆ ಗುತ್ತಿಗೆಯನ್ನು ಅವರ ವಾರಸುದಾರರಿಗೆ ಮುಂದುವರೆಸುವ ಅಥವಾ ನೀಡದಿರುವ ಹಕ್ಕು ವ್ಯವಸ್ಥಾಪಕ ನಿರ್ದೇಶಕರಿಗೆ ಕಾಯ್ದಿರಿಸಲಾಗಿದೆ. ಹಾಗು ಅಂತಹ ಸಂದರ್ಭಗಳಲ್ಲಿ ಅವರಿಗೆ ಡೇರಿಯ ವತಿಯಿಂದ ಪಾವತಿಸುವ ಹಣವೇನಾದರೂ ಇದ್ದಲ್ಲಿ ಇದನ್ನು ಕಾನೂನು ರೀತಿ ನಿಯಮಾನುಸಾರ ಪರಿಶೀಲಿಸಿ ಬಿಡುಗಡೆಗೊಳಿಸುವ ಅಧಿಕಾರವು ವ್ಯವಸ್ಥಾಪಕ ನಿರ್ದೇಶಕರು ಶಿವಮೊಗ್ಗ ಹಾಲು ಒಕ್ಕೂಟದ ವಿವೇಚನೆಗೆ ಒಳಪಟ್ಟಿರುತ್ತದೆ.

29. ಗುತ್ತಿಗೆದಾರರು ಗುತ್ತಿಗೆ ಅವಧಿಯಲ್ಲಿ ಯಾವುದೇ ಅಪರಾಧ / ಕಾನೂನು ಉಲ್ಲಂಘನೆಗಳಲ್ಲಿ ಭಾಗಿಯಾಗಿರುವುದು ಕಂಡು ಬಂದಲ್ಲಿ ಇಂತವರ ಮೇಲೆ ಆರಕ್ಷಕ ಠಾಣೆ / ನ್ಯಾಯಾಲಯದಲ್ಲಿ ಮೊಕದ್ದಮೆಗಳೇನಾದರೂ ಇರುವುದು ಕಂಡುಬಂದಲ್ಲಿ ಇಂತಹ ಗುತ್ತಿಗೆದಾರರ ಗುತ್ತಿಗೆಯನ್ನು ಯಾವುದೇ ಮುನ್ಸೂಚನೆ ನೀಡದೆ ರದ್ದುಪಡಿಸುವ ಅಧಿಕಾರವು ವ್ಯವಸ್ಥಾಪಕ ನಿರ್ದೇಶಕರು ಶಿವಮೊಗ್ಗ ಹಾಲು ಒಕ್ಕೂಟ ಕಾಯ್ದಿರಿಸಲಾಗಿದೆ. ಮತ್ತು ಅಂತಹವರ ಇಡುಗಂಟನ್ನು ಸಹ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

30. ಗುತ್ತಿಗೆಯ ವಾಹನ ಚಾಲಕರು/ಸಿಬ್ಬಂದಿಗಳು ಡೇರಿಯ ಆವರಣದೊಳಗಡೆ ಟೇಪ್‌ರಿಕಾರ್ಡರ್ / ಐ ಪಾಡ್ /ಹಾರ್ನ್ / ಮೊಬೈಲ್, ದೂರವಾಣಿ / ತಂಬಾಕು / ದೂಮಪಾನ / ಮದ್ಯಪಾನ ವಗೈರೆ ಉಪಯೋಗಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. ಈ ಎರಡು ನಿಯಮವನ್ನು ಉಲ್ಲಂಘಿಸುವುದು ಕಂಡು ಬಂದಲ್ಲಿ ಸೂಕ್ತ ದಂಡ ವಿಧಿಸಲಾಗುವುದಲ್ಲದೆ ಡೇರಿಯ ನಿಯಮಗಳಂತೆ ಕ್ರಮ ಜರುಗಿಸಲಾಗುವುದು.

31. ಗುತ್ತಿಗೆ ಅವಧಿಯಲ್ಲಿ ಗುತ್ತಿಗೆದಾರರು ನೀಡಿರುವ ವಾಹನಕ್ಕೆ ಏಜೆಂಟರು ಹಾಗೂ ಗ್ರಾಹಕರ ಮಾಹಿತಿಗಾಗಿ ಗುರುತಿಗಾಗಿ ನಂದಿನಿ ಉತ್ಪನ್ನಗಳ ಜಾಹೀರಾತನ್ನು ಗುತ್ತಿಗೆ ವಾಹನಗಳಿಗೆ ಡೇರಿಯ ವತಿಯಿಂದ ಬರೆಸಲಾಗುವುದು. ಸದರಿ ಜಾಹೀರಾತನ್ನು ಗುತ್ತಿಗೆ ಅವಧಿಯವರೆವಿಗೂ ಕಾಪಾಡುವುದು ಗುತ್ತಿಗೆದಾರರ ಜವಾಬ್ದಾರಿಯಾಗಿರುತ್ತದೆ. ಒಂದು ವೇಳೆ ಗುತ್ತಿಗೆದಾರರ ಅಜಾಗರೂಕತೆಯಿಂದ ಜಾಹೀರಾತುಗಳು ಹಾಳಾದಲ್ಲಿ ಪುನಃ ಬರೆಸುವ ವೆಚ್ಚವನ್ನು ಸಾರಿಗೆ ಬಿಲ್ಲಿನಿಂದ ವಸೂಲಿ ಮಾಡಲು ಕ್ರಮ ಜರುಗಿಸಲಾಗುವುದು.

32. ದಿನನಿತ್ಯದ ವಾಹನ ಕೆಟ್ಟು ನಿಂತಾಗ ಅಪಘಾತ ಆದಾಗ ಇತರೆ ಅನಿರೀಕ್ಷಿತ ಸಂದರ್ಭ ಒದಗಿ ಬಂದಾಗ ಬದಲಿ ವಾಹನವನ್ನು ಗುತ್ತಿಗೆದಾರ ಒದಗಿಸಿದಾಗ, 42 ರ ನಿಯಮದಡಿ ಹಾಗೂ ಉಪನಿಯಮ 1,2,3 ರ ಅಡಿಯಲ್ಲಿ ದಂಡವನ್ನು ವಿಧಿಸಲಾಗುವುದಿಲ್ಲ. ಬದಲಿ ವಾಹನವನ್ನು ಒದಗಿಸಿದ್ದರೂ ಉಳಿದ ಉಪನಿಬಂಧನೆ 4 ರಿಂದ 8 ರ ಅಡಿಯಲ್ಲಿ ಕ್ರಮ ಜರುಗಿಸಲಾಗುವುದು.

33. ಗುತ್ತಿಗೆ ಅವಧಿಯಲ್ಲಿ ವಿತರಣಾ ಕಾರ್ಯಕ್ಕೆ ಯಾವುದೇ ದಿನ ವಾಹನವನ್ನು ಒದಗಿಸುವಲ್ಲಿ ವಿಫಲವಾದರೆ, ಶಿವಮೊಗ್ಗ ಹಾಲು ಒಕ್ಕೂಟವು ಅಂದಿನ ಕಾರ್ಯಕ್ಕೆ ಮಾಡಿದ ಸಾರಿಗೆ ವೆಚ್ಚವನ್ನು ದಂಡ ವಿಧಿಸಲಾಗುವುದು.

34. ಚಾಲಕನಿಗೆ /ಲೋಡರ್‌ಗಳಿಗೆ ಡೇರಿಯೊಳಗೆ ಪ್ರವೇಶ ಅನುಮತಿ ಪತ್ರ ನೀಡುವ ಸಲುವಾಗಿ ಚಾಲಕನ /ಲೋಡರ್‌ಗಳ ಪಾಸ್ ಪೋರ್ಟ್ ಅಳತೆಯ ಎರಡು ಭಾವ ಚಿತ್ರಗಳು, ಹೆಸರು, ವಿಳಾಸವನ್ನು ಹೊಂದಿರುವ ಗುರುತಿನ ಚೀಟಿ ಗುತ್ತಿಗೆದಾರರು ನೀಡತಕ್ಕದ್ದು.

35. ಅಂತಿಮ ಹಣ ಪಾವತಿ ಮುನ್ನ ಇತ್ತೀಚಿನ ವರಮಾನ ತೆರಿಗೆ ಪ್ರಮಾಣ ಪತ್ರ/ವೃತ್ತಿ ತೆರಿಗೆ ಪ್ರಮಾಣ ಪತ್ರ ಒದಗಿಸತಕ್ಕದ್ದು.

36. ಗುತ್ತಿಗೆದಾರರು ವೃತ್ತಿ ತೆರಿಗೆ ನೋಂದಣಿ ಮಾಡಿಸಿ ಸರ್ಕಾರವು ನಿಗಧಿಪಡಿಸಿರುವ ವೃತ್ತಿ ತೆರಿಗೆಯನ್ನು ಸರ್ಕಾರಕ್ಕೆ ಪಾವತಿ ಮಾಡಿರಬೇಕು. ತಪ್ಪಿದ್ದಲ್ಲಿ ಸರ್ಕಾರದಿಂದ ನಿಗದಿಪಡಿಸಿರುವ ವೃತ್ತಿ ತೆರಿಗೆಯನ್ನು ಸಾರಿಗೆ ಗುತ್ತಿಗೆದಾರರ ಬಿಲ್ಲಿನಲ್ಲಿ ಕಠಾಯಿಸಿ ಸರ್ಕಾರಕ್ಕೆ ಪಾವತಿಸಲಾಗುವುದು.

37. ಗುತ್ತಿಗೆದಾರ ನಿಯಮ ನಿಬಂಧನೆಗೆ ಭಂಗ ತಂದಿದ್ದೇ ಆದರೆ, ಗುತ್ತಿಗೆ ರದ್ದಾಗುತ್ತದೆಂದು ಅರಿತವನಾಗಿರಬೇಕು. ನಿಬಂಧನೆ ಭಂಗದಿಂದಾಗಿ ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಉಂಟಾಗಬಹುದಾದ ನಷ್ಟವನ್ನು ಭರಿಸುವ ಮತ್ತು ಶಿವಮೊಗ್ಗ ಹಾಲು ಒಕ್ಕೂಟವು ಆಧಾರ ಮೊತ್ತವನ್ನು ಮುಟ್ಟುಗೋಲು ಹಾಕಿಕೊಳ್ಳುವುದರ ಬಗ್ಗೆ ಗುತ್ತಿಗೆದಾರ ಅರಿತವನಾಗಿರಬೇಕು.

38. ಗುತ್ತಿಗೆದಾರರು ಪ್ರತಿ ತಿಂಗಳು ತಮ್ಮ ಗುತ್ತಿಗೆ ಹಣ ಪಡೆಯುವ ಸಲುವಾಗಿ ಎಸ್.ಬಿ.ಎಂ. ಯಾವುದೇ ಶಾಖೆಯ ಬ್ಯಾಂಕಿನಲ್ಲಿ ಖಾತೆ ಉಳ್ಳವರಾಗಿರಬೇಕು ಹಾಗೂ ಪಾನ್ ಕಾರ್ಡ್ ಹೊಂದಿದ್ದು, ಬಿಲ್‌ನ ಮೇಲೆ ಪಾನ್ ನಂ. ನಮೂದಿಸತಕ್ಕದ್ದು.

39. ಈ ಗುತ್ತಿಗೆಯಿಂದ ಎದುರಾಗಬಹುದಾದ ಎಲ್ಲಾ ವಿವಾದಗಳನ್ನು ವ್ಯವಸ್ಥಾಪಕ ನಿರ್ದೇಶಕರು ಶಿವಮೊಗ್ಗ ಹಾಲು ಒಕ್ಕೂಟರವರ ಗಮನಕ್ಕೆ ತರತಕ್ಕದ್ದು ಅವರೇ ಈ ಸಮಸ್ಯೆಯ ಇತ್ಯರ್ಥದ ಬಗ್ಗೆ ಪರಮಾಧಿಕಾರ ಉಳ್ಳವರಾಗಿದ್ದ ಅವರ ನಿರ್ಧಾರವೇ ಅಂತಿಮವಾದುದೂ ಆಗಿದೆ.

40. ಮೇಲಿನ ನಿಯಮಗಳಿಗೆ ಇತರೆ ನಿಯಮಗಳನ್ನು ಸೇರಿಸುವ ಅಥವಾ ಕಳೆಯುವ ಮತ್ತು ವ್ಯತ್ಯಯಗೊಳಿಸುವ ಅಧಿಕಾರವನ್ನು ಶಿವಮೊಗ್ಗ ಹಾಲು ಒಕ್ಕೂಟವು ಕಾಯ್ದಿರಿಸಿಕೊಂಡಿದೆ.

41. ಯಾವುದೇ ಗುತ್ತಿಗೆದಾರರು ಸಕಾರಣದಿಂದ ಗುತ್ತಿಗೆಯನ್ನು ರದ್ದುಗೊಳಿಸಲು ಇಚ್ಛಿಸಿದಲ್ಲಿ ಸದರಿಯವರು 65 ದಿನಗಳ ಮುಂಚಿತವಾಗಿ ಲಿಖಿತ ಮೂಲಕ ಡೇರಿಗೆ ತಿಳಿಸತಕ್ಕದ್ದು, ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ಸದರಿ ಮನವಿಯನ್ನು ಪರಿಗಣಿಸಿ ಭದ್ರತಾ ಠೇವಣಿಯನ್ನು ಮುಟ್ಟುಗೋಲು ಹಾಕಿಕೊಂಡು ಗುತ್ತಿಗೆಯನ್ನು ರದ್ದುಗೊಳಿಸುವ ಅಧಿಕಾರ ಹೊಂದಿರುತ್ತಾರೆ.

42. ಗುತ್ತಿಗೆದಾರರು ನಿಯಮ ನಿಬಂಧನೆಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ರದ್ದು ಮಾಡಲು ಶಿವಮೊಗ್ಗ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ಅಧಿಕಾರ ಉಳ್ಳವರಾಗಿರುತ್ತಾರೆ. ಗುತ್ತಿಗೆ ರದ್ದುಪಡಿಸಿದಲ್ಲಿ ಆಗುವ ನಷ್ಟಕ್ಕೆ ಗುತ್ತಿಗೆದಾರನೇ ಜವಾಬ್ದಾರನಾಗಿದ್ದು ಅದನ್ನು ವಸೂಲಿ ಮಾಡುವ/ ಸರಿಪಡಿಸುವ ಅಧಿಕಾರ ವ್ಯವಸ್ಥಾಪಕ ನಿರ್ದೇಶಕರು, ಶಿವಮೊಗ್ಗ ಹಾಲು ಒಕ್ಕೂಟರವರಿಗೆ ಇರುತ್ತದೆ.

ಟೆಂಡರ್‌ದಾರರ ಸಹಿ ಮತ್ತು ಹೆಸರು

(ದಪ್ಪ ಅಕ್ಷರಗಳಲ್ಲಿ)

## ಸಾರಿಗೆದಾರರ ಪೂರ್ಣ ಮಾಹಿತಿ

| | | |
|---|---|---|
| 1 | ಸಾರಿಗೆದಾರರ ಹೆಸರು | : |
| 2 | ವಿಳಾಸ ದೂರವಾಣಿ ಸಂಖ್ಯೆ / ಫ್ಯಾಕ್ಸ್ ಸಂಖ್ಯೆ / ಮೊಬೈಲ್ ಸಂಖ್ಯೆ | : |
| 3 | ನೀವು ಕಂಪನಿ ಪಾಲುದಾರರಾಗಿದ್ದಲ್ಲಿ ಅದರ ಪೂರ್ಣ ಮಾಹಿತಿ | : |
| 4. | ಸಾರಿಗೆ ಕಾರ್ಯ ಪ್ರಾರಂಭಿಸಿದ ವರ್ಷ ನೀವು ವ್ಯವಹರಿಸುವ ಬ್ಯಾಂಕಿನ ವಿಳಾಸ ಮತ್ತು ಖಾತೆ ಸಂಖ್ಯೆ | : |
| 5. | ನಿಮ್ಮ ಹೆಸರಿನಲ್ಲಿ ಅಥವಾ ಕಂಪನಿ ಹೆಸರಿನಲ್ಲಿ ಹೊಂದಿರುವ ವಾಹನಗಳ ಸಂಖ್ಯೆ | : |
| 6. | ಗುತ್ತಿಗೆ ನಿರ್ವಹಿಸಲು ಇಚ್ಛಿಸುವ ಮಾರ್ಗದ ಹೆಸರು/ ಸಂಖ್ಯೆ | : |
| 7. | ಮಾರ್ಗಕ್ಕೆ ಒದಗಿಸುವ ವಾಹನ ಸಂಖ್ಯೆ ಮತ್ತು ದಾಖಲಾತಿ ಪ್ರತಿಗಳು | : |
| | ಆರ್.ಸಿ. ಇನ್ಸೂರೆನ್ಸ್ ತೆರಿಗೆ ಇತ್ಯಾದಿಗಳು | |

**ತಮ್ಮ ವಿಶ್ವಾಸಿ,**

**ಟೆಂಡರ್‌ದಾರರ ಸಹಿ ಮತ್ತು ವಿಳಾಸ**

ಮೇಲ್ಕಂಡ ಮಾಹಿತಿಗಳು ಸತ್ಯಪೂರ್ಣವಾಗಿದ್ದು ಏನಾದೂ ಬದಲಾವಣೆಗಳು ಆದಲ್ಲಿ ಕೂಡಲೇ ವರದಿ ಮಾಡಲಾಗುವುದು ಹಾಗೂ ಕಾಲಕಾಲಕ್ಕೆ ಆಗುವ ಬದಲಾವಣೆ ಬಗ್ಗೆ ತಿಳಿಸಲಾಗುವುದು.

ಟೆಂಡರ್‌ದಾರರ ಸಹಿ,

# **-:ಟೆಕ್ನಿಕಲ್ ಟೆಂಡರ್:-**

ಗೆ,

**ವ್ಯವಸ್ಥಾಪಕ ನಿರ್ದೇಶಕರು**
**ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ**
**ಜಿಲ್ಲಾ ಸಹಕಾರ ಹಾಲು ಒಕ್ಕೂಟ**
**ಮಾಚೇನಹಳ್ಳಿ ನಿದಿಗೆ ಅಂಚೆ**
**ಶಿವಮೊಗ್ಗ.**

ಮಾನ್ಯರೇ,

ವಿಷಯ : ಟೆಂಡರ್‌ನಲ್ಲಿ ಬಿಡ್ ಮಾಡುವ ಬಗ್ಗೆ.
ಉಲ್ಲೇಖ : ಐ.ಎಫ್.ಟಿ. ಸಂಖ್ಯೆ/ಶಿದಾಚಿಸಹಾಒ/ಮಾರುಕಟ್ಟೆ/ಕ್ಷೀ.ಭಾ/ಟೆಂಡರ್/2344/2017-18
**ದಿನಾಂಕ: 19.06.2017**

****

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಹಾಲಿನ ಪುಡಿ ವಿತರಣೆಗಾಗಿ ಒಂದು ವರ್ಷದ ಗುತ್ತಿಗೆಗೆ ಸಂಬಂಧಿಸಿದ ಬಿಡ್ ನಿಯಮಾವಳಿಗಳ ಮಾಹಿತಿಗಳನ್ನು ತಿಳಿದು ಷರತ್ತು ಮತ್ತು ನಿಬಂಧನೆಗಳನ್ನು ಓದಿ, ಅರ್ಥ ಮಾಡಿಕೊಂಡಿದ್ದು ಟೆಂಡರ್‌ನಲ್ಲಿ ಭಾಗವಹಿಸುತ್ತಿದ್ದೇನೆ. ಟೆಂಡರ್‌ಗೆ ಮೂಲತಃ ಅವಶ್ಯಕತೆ ಇರುವ ಇ.ಎಂ.ಡಿ. (ಬಿಡ್ಡು ಠೇವಣಿ) ಯನ್ನು ಒಕ್ಕೂಟದ ನಿಯಮಾವಳಿಯಂತೆ ಸಲ್ಲಿಸಿದೆ. ಮಾರ್ಗಕ್ಕೆ ಸಂಬಂಧಿಸಿದ ವಾಹನದ ದಾಖಲಾತಿ ಪ್ರತಿಗಳನ್ನು ಸಹ ಲಗತ್ತಿಸಲಾಗಿದೆ/ಟೆಂಡರ್ ಒಪ್ಪಿಗೆಯಾದಲ್ಲಿ ಟೆಂಡರ್ ಪ್ರಕಟಣೆಯಲ್ಲಿ ಸೂಚಿಸಿದ ಸಾಮರ್ಥ್ಯದ / ಮಾದರಿಯ ಸೂಕ್ತ ವಾಹನ ಖರೀದಿಸಿ ನೀಡಲಾಗುವುದು.

ಮೊತ್ತ ರೂ. ........................................ (ರೂಪಾಯಿ ......................................ಗಳು ಮಾತ್ರ) ಬ್ಯಾಂಕ್ ...............................................................................

ವಂದನೆಗಳೊಂದಿಗೆ,

ಟೆಂಡರ್ ಅರ್ಜಿ ಸಲ್ಲಿಸಿದ

ಮಾರ್ಗದ ಹೆಸರು :

ಟೆಂಡರ್‌ದಾರರ ಸಹಿ,

ವಿಳಾಸ :

ಮೊಬೈಲ್ ನಂ:

ಅಡಕ: 1) ವಾಹನದ ಆರ್.ಸಿ. ಪ್ರಸ್ತಕದ ಪ್ರತಿ

2) ಓಟಿನ ಗುರುತಿನ ಚೀಟಿ

3) ಬ್ಯಾಂಕ್ ಪಾಸ್‌ಪುಸ್ತಕ ಪ್ರತಿ

4) ಪಾನ್ ಕಾರ್ಡ್

## ಪಟ್ಟಿ ಪರಿಶೀಲನೆ (ಚೆಕ್ ಲೀಸ್ಟ್)

## ಹಾಲಿನ ಪುಡಿ ವಿತರಣೆಗಾಗಿ ಟೆಂಡರ್

| | | | | |
|---|---|---|---|---|
| 01 | ನಿಗದಿತ ಇ.ಎಂ.ಡಿ.ಮೊತ್ತ ಸಲ್ಲಿಸಲಾಗಿದೆಯಾ ? | : | ಹೌದು | ಇಲ್ಲ |
| 02 | ಇ.ಎಂ.ಡಿ.ಗೆ ಸಂಬಂಧಿಸಿದ ಡಿ.ಡಿ. ಅಥವಾ ನಗದು ಪಾವತಿಸಿದ ರಶೀದಿ ಟೆಂಡರ್ ಫಾರಂ ಜೊತೆ ಲಗತ್ತಿಸಲಾಗಿದೆಯಾ | | ಹೌದು | ಇಲ್ಲ |
| 03 | ಲಗತ್ತಿಸಿದಲ್ಲಿ ಡಿ.ಡಿ. ರಶೀದಿ ಸಂಖ್ಯೆ ದಿನಾಂಕ ಮತ್ತು ಯಾವ ಶಾಖೆಯ ಬ್ಯಾಂಕ್<br>ಡಿ.ಡಿ. ಸಂಖ್ಯೆ .......................... ದಿನಾಂಕ<br>ಬ್ಯಾಂಕ್ ಹೆಸರು .......................................... | : | | |
| 04 | ಸಾರಿಗೆದಾರರ ಪೂರ್ಣ ಮಾಹಿತಿ (ಬಯೋಡಾಟಾ) ಸಲ್ಲಿಸಲಾಗಿದೆಯೇ ? | : | ಹೌದು | ಇಲ್ಲ |
| 05 | ಗುತ್ತಿಗೆಗೆ ನೀಡುವ ವಾಹನದ ದಾಖಲಾತಿ ಪ್ರತಿ ಲಗತ್ತಿಸಲಾಗಿದೆಯೇ? | : | ಹೌದು | ಇಲ್ಲ |
| 06 | ಆದಾಯ ತೆರಿಗೆ ಪ್ರಮಾಣ ಪತ್ರ ಲಗತ್ತಿಸಲಾಗಿದೆಯೇ ? | : | ಹೌದು | ಇಲ್ಲ |
| 07 | ವಾಣಿಜ್ಯ ಟೆಂಡರ್ ದರಪಟ್ಟಿಯನ್ನು ಭಾಗ-2 ರಲ್ಲಿ ಅಕ್ಷರ ಮತ್ತು ಪದಗಳನ್ನು ದರಗಳನ್ನು ನಮೂದಿಸಿದೆಯೇ | : | ಹೌದು | ಇಲ್ಲ |
| 08 | ವಾಹನದ ಆರ್.ಸಿ. ಪ್ರಸ್ತಕದ ಪ್ರತಿ | : | ಹೌದು | ಇಲ್ಲ |
| 09 | ಓಟಿನ ಗುರುತಿನ ಚೀಟಿ | : | ಹೌದು | ಇಲ್ಲ |
| 10 | ಬ್ಯಾಂಕ್ ಪಾಸ್‌ಪುಸ್ತಕ ಪ್ರತಿ | : | ಹೌದು | ಇಲ್ಲ |
| 11 | ಪಾನ್ ಕಾರ್ಡ್ | : | ಹೌದು | ಇಲ್ಲ |

**ಎಚ್ಚರಿಕೆ :** ನಿಗದಿಪಡಿಸಿರುವ ಇ.ಎಂ.ಡಿ. ಲಗತ್ತಿಸದಿದ್ದಲ್ಲಿ ಟೆಂಡರ್ ನಿಯಮದ ಪ್ರಕಾರ ಟೆಂಡರ್ ಅರ್ಜಿ ರದ್ದಾಗುತ್ತದೆ.

ಟೆಂಡರ್‌ದಾರರ ಸಹಿ ಮತ್ತು ಹೆಸರು

**ನಗದು ರಶೀದಿ ಸಂಖ್ಯೆ** **ದಿನಾಂಕ:**

## -:ಕಮರ್ಷಿಯಲ್ ಟೆಂಡರ್:-

## -: <u>ದರಪಟ್ಟಿ</u> :-

**ಗೆ,**

ವ್ಯವಸ್ಥಾಪಕ ನಿರ್ದೇಶಕರು,
ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರ
ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮಾಚೇನಹಳ್ಳಿ, (ನಿದಿಗೆ) ಅಂಚೆ- 577 222
ಶಿವಮೊಗ್ಗ ಜಿಲ್ಲೆ.

**ಮಾನ್ಯರೇ,**

ಉಲ್ಲೇಖ : ಐ.ಎಫ್.ಟಿ. ಸಂಖ್ಯೆ/ಶಿದಾಚಿಸಹಾಒ/ಮಾರುಕಟ್ಟೆ/ಕ್ಷೀ.ಭಾ/ಟೆಂಡರ್/2344/2017-18
**ದಿನಾಂಕ: 19.06.2017**

ಮೇಲಿನ ಉಲ್ಲೇಖಕ್ಕೆ ಸಂಬಂಧಿದಂತೆ, ಕೆಳಗೆ ಸಹಿ ಮಾಡಿರುವ ನಾನು/ನಾವು ನನ್ನ ದರ ಪಟ್ಟಿಯನ್ನು ಒಂದು ವರ್ಷದ ಅವದಿಗೆ ಮದರ್ ಡೈರಿ, ಬೆಂಗಳೂರು ಮತ್ತು ಧಾರವಾಡ ಪ್ಯಾಕಿಂಗ್ ಕೇಂದ್ರಗಳಿಂದ ಹಾಲಿನ ಪುಡಿಯನ್ನು ಸ್ವೀಕರಿಸಿ ನಿಗಧಿತ ಕಾಲದಲ್ಲಿ ತಾಲ್ಲೂಕು ಕೇಂದ್ರಗಳಿಗೆ ತಲುಪಿಸಲು ವಾಹನಗಳನ್ನು ಒದಗಿಸಲು ಟೆಂಡರ್‌ನ ಅನುಬಂದದ ನಮೂನೆಯಲ್ಲಿ ದರಪಟ್ಟಿಯನ್ನು ಸಲ್ಲಿಸಿರುತ್ತೇನೆ

ಅನುಭಂದ ದರಪಟ್ಟಿಯನ್ನು ನಾನು/ನಾವು ಕಚೇರಿಯಿಂದ ಸರಬರಾಜು ಮಾಡಿರುವ ಟೆಂಡರ್ ದಾಖಲೆಗಳು, ಟೆಂಡರ್ ನಿಬಂಧನೆಗಳು, ಮಾರ್ಗಸೂಚಿ ಮತ್ತು ಟೆಂಡರ್ ಷರತ್ತುಗಳನ್ನು ಪೂರ್ಣವಾಗಿ ಓದಿ ಅರ್ಥೈಸಿಕೊಂಡು ಸಲ್ಲಿಸಿರುತ್ತೇನೆ/ವೆ. ಯಾವುದೇ ಟೆಂಡರ್‌ನ್ನು ಅಂಗೀಕರಿಸುವ / ತಿರಸ್ಕರಿಸುವ ಅಧಿಕಾರವು ಮತ್ತು ಈ ಟೆಂಡರ್ ಷರತ್ತು ನಿಬಂಧನೆಗಳ ಬಗ್ಗೆ ಯಾವುದೇ ವಿವಾದವಿದ್ದಲ್ಲಿ ವ್ಯವಸ್ಥಾಪಕ ನಿರ್ದೇಶಕರು, (ಶಿವಮೊಗ್ಗ, ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲಾ ಸಹಕಾರಿ ಹಾಲು ಒಕ್ಕೂಟ) ಕೈಗೊಳ್ಳುವ ತೀರ್ಮಾನವೇ ಅಂತಿಮವೆಂದು ಒಪ್ಪಿ ಈ ಟೆಂಡರ್‌ನಲ್ಲಿ ಭಾಗವಹಿಸಿರುತ್ತೇನೆ/ವೆ.

**ತಮ್ಮ ವಿಶ್ವಾಸಿ**

**ಟೆಂಡರ್‌ದಾರರ ಸಹಿ ಮತ್ತು ಹೆಸರು**

1. **<u>ಮದರ್ ಡೈರಿಯಿಂದ ಚಿತ್ರದುರ್ಗ ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿನ ಖಾಸಗಿ ಗುತ್ತಿಗೆದಾರರ ಗೋದಾಮುಗಳಿಗೆ / ಎಲ್ಲಾ ತಾಲ್ಲೂಕು ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ವೆಚ್ಚದ ಪಟ್ಟಿ:</u>**

| ತಾಲ್ಲೂಕು ಕೇಂದ್ರಗಳು | 3 ಟನ್ ವರೆಗೆ (ಪ್ರತಿ ಟ್ರಿಪ್‌ಗೆ) | 3 ರಿಂದ 6 ಟನ್ ವರೆಗೆ (ಪ್ರತಿ ಟ್ರಿಪ್‌ಗೆ) | 6 ರಿಂದ 10 ಟನ್‌ವರೆಗೆ (ಪ್ರತಿ ಟ್ರಿಪ್‌ಗೆ) | 10 ಟನ್ ಮೇಲ್ಪಟ್ಟು ಪ್ರತೀ ಟನ್‌ಗೆ |
|---|---|---|---|---|
| | ರೂ. ಪೈಸೆ | ರೂ. ಪೈಸೆ | ರೂ. ಪೈಸೆ | ರೂ. ಪೈಸೆ |
| ಚಿತ್ರದುರ್ಗ | | | | |
| ಹೊಸದುರ್ಗ | | | | |
| ಹೊಳಲ್ಕೆರೆ | | | | |
| ಹಿರಿಯೂರು | | | | |
| ಚಳ್ಳಕೆರೆ | | | | |
| ಮೊಳಕಾಲ್ಮೂರು | | | | |

ನಿಗದಿತ ಟ್ರಿಪ್‌ನಲ್ಲಿ 2 ಅಥವಾ ಅದಕ್ಕಿಂತ ಹೆಚ್ಚಿನ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ಮಾಡಬೇಕಾದ ಸಂದರ್ಭದಲ್ಲಿ ಹೆಚ್ಚುವರಿಯಾಗಿ ರೂ. __________/- ನ್ನು ಪಾವತಿಸಲು ಕೋರಿದೆ.

**ಟೆಂಡರ್‌ದಾರರ ಸಹಿ ಮತ್ತು ಹೆಸರು**

**2. ಧಾರವಾಡ ಪ್ಯಾಕಿಂಗ್ ಕೇಂದ್ರಗಳಿಂದ ಶಿವಮೊಗ್ಗ, ದಾವಣಗೆರೆ ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿನ KFCSC ಗೋದಾಮುಗಳಿಗೆ / ಎಲ್ಲಾ ತಾಲ್ಲೂಕು ಅಂಗನವಾಡಿ ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ವೆಚ್ಚದ ಪಟ್ಟಿ:**

| ತಾಲ್ಲೂಕು ಕೇಂದ್ರಗಳು | 3 ಟನ್ ವರೆಗೆ (ಪ್ರತಿ ಟ್ರಿಪ್‌ಗೆ) | 3 ರಿಂದ 6 ಟನ್ ವರೆಗೆ (ಪ್ರತಿ ಟ್ರಿಪ್‌ಗೆ) | 6 ರಿಂದ 10 ಟನ್‌ವರೆಗೆ (ಪ್ರತಿ ಟ್ರಿಪ್‌ಗೆ) | 10 ಟನ್ ಮೇಲ್ಪಟ್ಟು ಪ್ರತೀ ಟನ್‌ಗೆ |
|---|---|---|---|---|
| | ರೂ. ಪೈಸೆ | ರೂ. ಪೈಸೆ | ರೂ. ಪೈಸೆ | ರೂ. ಪೈಸೆ |
| ಶಿವಮೊಗ್ಗ | | | | |
| ಭದ್ರಾವತಿ | | | | |
| ತೀರ್ಥಹಳ್ಳಿ | | | | |
| ಸಾಗರ | | | | |
| ಶಿಕಾರಿಪುರ | | | | |
| ಸೊರಬ | | | | |
| ಹೊಸನಗರ | | | | |

| | | | | |
|---|---|---|---|---|
| ದಾವಣಗೆರೆ | | | | |
| ಹರಿಹರ | | | | |
| ಹರಪನಹಳ್ಳಿ | | | | |
| ಚನ್ನಗಿರಿ | | | | |
| ಜಗಳೂರು | | | | |
| ಹೊನ್ನಾಳಿ | | | | |

ನಿಗದಿತ ಟ್ರಿಪ್‌ನಲ್ಲಿ 2 ಅಥವಾ ಅದಕ್ಕಿಂತ ಹೆಚ್ಚಿನ ತಾಲ್ಲೂಕು ಕೇಂದ್ರಗಳಿಗೆ ಹಾಲಿನ ಪುಡಿ ಸಾಗಾಣಿಕೆ ಮಾಡಬೇಕಾದ ಸಂದರ್ಭದಲ್ಲಿ ಹೆಚ್ಚುವರಿಯಾಗಿ ರೂ. _________/- ನ್ನು ಪಾವತಿಸಲು ಕೋರಿದೆ.

**ಟೆಂಡರ್‌ದಾರರ ಸಹಿ ಮತ್ತು ಹೆಸರು**